# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ –278 | ಆರ್‌ಎನ್‌ಐ ನಂ: ಕೆಎಆರ್‌ಕೆಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ:29–05–2025 ಗುರುವಾರ | ಪುಟ: 4 | ಬೆಲೆ : ರೂ.2–00

Volume - 02 Issue - 278 | RNI No: KARKAN/2023/88462 | KA/SK/CTA-874/2024-2026 | Chitradurga | Date: 29-05-2025 Thursday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ತಾಲೂಕಿನಲ್ಲಿ ಕೋವಿಡ್ ಮುಂಜಾಗ್ರತೆ ಕ್ರಮಕೈಗೊಳ್ಳಿ: ಬಿ.ಆನಂದ್ 2

ಬಿತ್ತನೆ ಬೀಜ ಖರೀದಿ ವೇಳೆ ಕಡ್ಡಾಯವಾಗಿ ರಶೀದಿ ಪಡೆಯಿರಿ: ಗಂಗಾಧರಸ್ವಾಮಿ.ಜಿ.ಎಂ 3


ಮೇ 30, 31 ರಂದು DC, CEO, ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಸಭೆ ಕರೆದ ಸಿಎಂ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ವಿದ್ಯಾರ್ಥಿ ನಿಲಯ ಪ್ರವೇಶಕ್ಕೆ ಅರ್ಜಿ ಆಹ್ವಾನ



» **ಚಿತ್ರದುರ್ಗ**

2025–26ನೇ ಸಾಲಿಗೆ ಹೊಳಲ್ಕೆರೆ ತಾಲ್ಲೂಕಿನ ಡಾ.ಬಿ.ಆರ್.ಅಂಬೇಡ್ಕರ್ ಹಾಗೂ ಪರಿಶಿಷ್ಟ ವರ್ಗದ ಮೆಟ್ರಿಕ್ ಪೂರ್ವ, ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಿಗೆ ಪ್ರವೇಶಾತಿ ಬಯಸುವ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ವಿದ್ಯಾರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಸೂಕ್ತ ದಾಖಲಾತಿಗಳೊಂದಿಗೆ ಸಂಬಂಧಿಸಿದ ವಿದ್ಯಾರ್ಥಿ ನಿಲಯದ ನಿಲಯಪಾಲಕರಿಗೆ ಸಲ್ಲಿಸಬಹುದು ಎಂದು ಹೊಳಲ್ಕೆರೆ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರು (ಗ್ರೇಡ್–2) ತಿಳಿಸಿದ್ದಾರೆ.

### ಪ್ರಥಮ ಪಿಯು ಪ್ರವೇಶಾತಿ: ಆಯ್ಕೆ ಪಟ್ಟಿ ಪ್ರಕಟ

» **ಚಿತ್ರದುರ್ಗ**

2025–26ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ವಸತಿ ಪದವಿ ಪೂರ್ವ ಕಾಲೇಜುಗಳಿಗೆ ಪ್ರಥಮ ಪಿಯುಸಿ ಪ್ರವೇಶಕ್ಕಾಗಿ ಸೇವಾಸಿಂಧು ತಂತ್ರಾಂಶದಲ್ಲಿ ಕಳೆದ ಮೇ 03 ರಿಂದ 22 ರವರೆಗೆ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳಿಗೆ ಪ್ರಥಮ ಸುತ್ತಿನ ಆಯ್ಕೆಪಟ್ಟಿಯನ್ನು ಅಲ್ಪಸಂಖ್ಯಾತರ ನಿರ್ದೇಶನಾಲಯದ ಅಧಿಕೃತ ಜಾಲತಾಣ https://dom.karnataka.gov.in ನಲ್ಲಿ ಪ್ರಕಟಿಸಲಾಗಿದೆ. ಆಯ್ಕೆಪಟ್ಟಿಯಲ್ಲಿರುವ ವಿದ್ಯಾರ್ಥಿಗಳು ಪ್ರವೇಶಕ್ಕೆ ಸಂಬಂಧಿಸಿದ ದಾಖಲೆಗಳೊಂದಿಗೆ ಸಂಬಂಧಪಟ್ಟ ಕಾಲೇಜುಗಳಿಗೆ ಇದೇ ಮೇ31ರ ಸಂಜೆ 5 ಗಂಟೆಯೊಳಗೆ ಪ್ರವೇಶ ಪಡೆಯಬೇಕು. ಹೆಚ್ಚಿನ ಮಾಹಿತಿಗಾಗಿ ಸಂಬಂಧಪಟ್ಟ ಕಾಲೇಜು ಪ್ರಾಂಶುಪಾಲರು, ಜಿಲ್ಲಾ ಕಚೇರಿ ಹಾಗೂ ಅಲ್ಪಸಂಖ್ಯಾತರ ಜಿಲ್ಲಾ, ತಾಲ್ಲೂಕು ಮಾಹಿತಿ ಕೇಂದ್ರಗಳನ್ನು ಸಂಪರ್ಕಿಸಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಜಿ.ರೇಖಾ ತಿಳಿಸಿದ್ದಾರೆ.

### ಮಾಜಿ ಸೈನಿಕರಿಗೆ ಉದ್ಯೋಗಾವಕಾಶ

» **ಚಿತ್ರದುರ್ಗ**

ರೈಲ್ವೆ ಇಲಾಖೆಯ ಸೆಕ್ಯೂರಿಟಿ ಹುದ್ದೆಗಳಿಗೆ ಗುತ್ತಿಗೆ ಆಧಾರದಲ್ಲಿ ಮಾಜಿ ಸೈನಿಕರನ್ನು ಭರ್ತಿ ಮಾಡಿಕೊಳ್ಳುತ್ತಿದ್ದು, ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲೆಯ ಆಸಕ್ತ ಮಾಜಿ ಸೈನಿಕರಿಗೆ ಶಿವಮೊಗ್ಗ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಉಪನಿರ್ದೇಶಕರ ಕಚೇರಿಯಲ್ಲಿ ಹೆಸರು ನೋಂದಾಯಿಸಿಕೊಳ್ಳಲು ಮೇ 27ರವರೆಗೆ ಕಾಲಾವಕಾಶ ನೀಡಲಾಗಿತ್ತು. ಒಟ್ಟು 48 ಮಾಜಿ ಸೈನಿಕರು ತಮ್ಮ ಹೆಸರುಗಳನ್ನು ನೋಂದಾಯಿಸಿಕೊಂಡಿರುತ್ತಾರೆ.ನೋಂದಾಯಿತರ ಪಟ್ಟಿಯನ್ನು ಕಚೇರಿಯ ಸೂಚನಾ ಫಲಕದಲ್ಲಿ ಹಾಕಲಾಗಿದ್ದು, ಈ ಪಟ್ಟಿಗೆ ಆಕ್ಷೇಪಣೆಗಳೇನಾದರೂ ಇದ್ದರೆ ಇದೇ ಮೇ30 ಒಳಗೆ ಕಚೇರಿಯಲ್ಲಿ ಸಲ್ಲಿಸಬಹುದು ಎಂದು ಶಿವಮೊಗ್ಗ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಉಪನಿರ್ದೇಶಕ ಡಾ.ಸಿ.ಎ.ಹಿರೇಮಠ ತಿಳಿಸಿದ್ದಾರೆ.

### ಯಾತ್ರಿ ನಿವಾಸ ಹಸ್ತಾಂತರ: ಅರ್ಜಿ ಆಹ್ವಾನ

» **ಚಿತ್ರದುರ್ಗ**

ಜಿಲ್ಲೆಯ ಹೊಳಲ್ಕೆರೆ ತಾಲ್ಲೂಕಿನ ಹನುಮನಕಟ್ಟೆ ಕೆಂಚಾಂಬ ದೇವಸ್ಥಾನದ ಬಳಿ, ಸಾಸಲು ಭೂತಪ್ಪ ದೇವಸ್ಥಾನದ ಬಳಿ ಹಾಗೂ ದುಮ್ಮಿಗೊಲ್ಲರಹಟ್ಟಿ ಜುಂಜಪ್ಪನ ದೇವಸ್ಥಾನದ ಬಳಿ ಯಾತ್ರಿ ನಿವಾಸ ನಿರ್ಮಿಸಲಾಗಿರುತ್ತದೆ. ಪ್ರತಿ ಯಾತ್ರಿ ನಿವಾಸಕ್ಕೆ ತಲಾ ರೂ.25 ಲಕ್ಷ ವೆಚ್ಚ ಭರಿಸಲಾಗಿರುತ್ತದೆ. ಯಾತ್ರಿ ನಿವಾಸ ಕಟ್ಟಡಗಳನ್ನು ಯಾರಾದರೂ ನಿರ್ವಹಣೆ ಮಾಡಲು ಇಚ್ಚಿಸಿದ್ದಲ್ಲಿ ಸಹಾಯಕ ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ, ಚಿತ್ರದುರ್ಗ ಕಚೇರಿಗೆ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ, ಸಹಾಯಕ ನಿರ್ದೇಶಕರ ಕಚೇರಿ, ಕೋಟೆ ಸಮೀಪ, ಕಾಮನಬಾವಿ ಬಡಾವಣೆ, ಚಿತ್ರದುರ್ಗ ಇವರನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

---

**ಶಾಲೆಗಳಲ್ಲಿನ್ನು ಮಕ್ಕಳ ಕಲರವ: ಸಂಭ್ರಮದ ಸ್ವಾಗತಕ್ಕೆ ಸಕಲ ಸಿದ್ಧತೆ**

# ಇಂದಿನಿಂದ ಶಾಲಾ ಪ್ರಾರಂಭೋತ್ಸವ






» **ಚಿತ್ರದುರ್ಗ**

ಬೇಸಿಗೆ ರಜೆ ಮುಗಿದು ಶಾಲೆಗಳಿಗೆ ಚಿಣ್ಣರು ಆಗಮಿಸಲು ಕ್ಷಣಗಣನೆ ಆರಂಭವಾಗಿದ್ದು, ಮೇ 29 ರಂದು ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮದಮೂಲಕವಿದ್ಯಾರ್ಥಿಗಳನ್ನು ಸ್ವಾಗತಿಸಲು ಶಿಕ್ಷಣ ಇಲಾಖೆ ಸಕಲ ಸಿದ್ಧತೆ ಕೈಗೊಂಡಿದೆ.

ಪ್ರತಿ ವರ್ಷದಂತೆ ಶೈಕ್ಷಣಿಕ ವರ್ಷದ ಆರಂಭದಲ್ಲಿ ವಿದ್ಯಾರ್ಥಿಗಳನ್ನು ವಿನೂತನವಾಗಿ ಸ್ವಾಗತಿಸುವ ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮಕ್ಕೆ ಜಿಲ್ಲೆಯ ಶಾಲೆಗಳು, ಶಿಕ್ಷಕರು ಸಿದ್ಧಗೊಂಡಿದ್ದಾರೆ.

ಶಾಲಾ ಶಿಕ್ಷಣ ಇಲಾಖೆಯ ಸೂಚನೆಯಂತೆ ಗುರುವಾರದಿಂದ ಶಾಲೆಗಳು ಬಾಗಿಲು ತೆರೆಯುವುದರಿಂದ ಬುಧವಾರ ಶಾಲೆಗಳಲ್ಲಿ ಸ್ವಚ್ಛತಾ ಕಾರ್ಯಗಳು ಭರದಿಂದ ಸಾಗಿದವು. ಸಿಬ್ಬಂದಿ ಜತೆ ಕೈ ಜೋಡಿಸಿದ ಶಿಕ್ಷಕರು ಶಾಲಾ ಆವರಣ, ತರಗತಿ ಕೋಣೆ, ಅಡುಗೆ ಕೋಣೆ, ಶೌಚಾಲಯ ಹಾಗೂ ನೀರಿನ ಸಿಂಟೆಕ್ಸ್, ಅಡುಗೆ ಪರಿಕರ ಸ್ವಚ್ಛತೆ ಹಾಗೂ ಶಾಲೆಗಳ ಮೇಲ್ಛಾವಣೆ ಮೇಲಿರುವ ಕಸ ತೆಗೆದು ಸ್ವಚ್ಛತೆ ಕಾರ್ಯ ನಡೆಸಿದರು.

ಜಿಲ್ಲೆಯ ವಿವಿಧೆಡೆಯ ಸರ್ಕಾರಿ ಪ್ರಾಥಮಿಕ, ಪ್ರೌಢಶಾಲೆಗಳಲ್ಲಿ ಶಾಲಾ ಪ್ರಾರಂಭಕ್ಕೆ ಸಕಲ ಸಿದ್ಧತೆಗಳು ನಡೆದುವು. ಗ್ರಾಮೀಣ ಭಾಗದಲ್ಲಿ ಮಕ್ಕಳ ಜತೆ ಗ್ರಾಮಗಳ ಓಣಿ ಓಣಿಗಳಲ್ಲಿ ಸಂಚರಿಸಿದ ಶಿಕ್ಷಕರು ಶಾಲಾ ಪ್ರಾರಂಭ ಹಾಗೂ ವಿಶೇಷ ದಾಖಲಾತಿ ಆಂದೋಲನ ನಡೆಸಿದರು. ಶಾಲಾ ಕಟ್ಟಡಗಳಿಗೆ ತಳಿರು ತೋರಣ, ರಂಗೋಲಿ ಬಿಡಿಸಿ ಮಕ್ಕಳಿಗೆ ಸಂಭ್ರಮದ ಸ್ವಾಗತದ ಮೂಲಕ ಶಾಲಾ ಪ್ರಾರಂಭೋತ್ಸವದ ಮೊದಲ ದಿನದಿಂದಲೇ ಬಿಸಿ ಊಟ ಹಾಗೂ ಮೊಟ್ಟೆ, ಬಾಳೆಹಣ್ಣು, ರಾಗಿ ಮಾಲ್ಟ್ ವಿತರಿಸಲು ಕ್ರಮವಹಿಸಲಾಗಿದ್ದು, 2025–26ನೇ ಸಾಲಿನಿಂದ ರಾಗಿ ಮಾಲ್ಟ್ ಅನ್ನು ವಾರದ ಐದು ದಿನಗಳ ಕಾಲ ಮಕ್ಕಳಿಗೆ ನೀಡಲು ಶಾಲಾ ಶಿಕ್ಷಣ ಇಲಾಖೆ ಕ್ರಮ ಕೈಗೊಂಡಿದೆ. ಅಲ್ಲದೆ ಈಗಾಗಲೆ ಅಗತ್ಯ ಪಠ್ಯಪುಸ್ತಕಗಳನ್ನು ಶಾಲೆಗಳಿಗೆ ಸರಬರಾಜು ಮಾಡಲು ಸರ್ಕಾರ ಸಾಕಷ್ಟು ಮುಂಚಿತವಾಗಿಯೇ ಕ್ರಮ ಕೈಗೊಂಡಿದೆ.





ಕಿರಿಯ ಪ್ರಾಥಮಿಕ ಶಾಲೆ, ಹಿರಿಯ ಪ್ರಾಥಮಿಕ ಶಾಲೆ ಹಾಗೂ ಪ್ರೌಢಶಾಲೆಗಳು ಸೇರಿ ಜಿಲ್ಲೆಯಲ್ಲಿ 1,751 ಸರ್ಕಾರಿ ಶಾಲೆಗಳು, 275 ಅನುದಾನಿತ ಶಾಲೆಗಳು ಹಾಗೂ 390 ಅನುದಾನ ರಹಿತ ಶಾಲೆಗಳು ಇವೆ. 2024–25ನೇ ಸಾಲಿನಲ್ಲಿ ಚಳ್ಳಕೆರೆ ತಾಲ್ಲೂಕಿನಲ್ಲಿ 27,920 ವಿದ್ಯಾರ್ಥಿಗಳು, ಚಿತ್ರದುರ್ಗ ತಾಲ್ಲೂಕು 24,267 ವಿದ್ಯಾರ್ಥಿಗಳು, ಹಿರಿಯೂರು ತಾಲ್ಲೂಕಿನಲ್ಲಿ 18,877 ವಿದ್ಯಾರ್ಥಿಗಳು, ಹೊಳಲ್ಕೆರೆ ತಾಲ್ಲೂಕಿನಲ್ಲಿ 11,750 ವಿದ್ಯಾರ್ಥಿಗಳು, ಹೊಸದುರ್ಗ ತಾಲ್ಲೂಕಿನಲ್ಲಿ 13,354 ವಿದ್ಯಾರ್ಥಿಗಳು ಹಾಗೂ ಮೊಳಕಾಲ್ಮುರು ತಾಲ್ಲೂಕಿನಲ್ಲಿ 17,663 ವಿದ್ಯಾರ್ಥಿಗಳು ಸೇರಿದಂತೆ ಜಿಲ್ಲೆಯಲ್ಲಿ ಒಟ್ಟು 1,13,831 ವಿದ್ಯಾರ್ಥಿಗಳು ನೋಂದಣಿಯಾಗಿದ್ದರು. ಪ್ರಸಕ್ತ ಶೈಕ್ಷಣಿಕ ಸಾಲಿನ ಶಾಲಾ ಪ್ರಾರಂಭೋತ್ಸವಕ್ಕೆ ಸಕಲ ಸಿದ್ಧತೆ ಕೈಗೊಳ್ಳಲಾಗಿದ್ದು, ಗುರುವಾರದಿಂದ ಶಾಲೆಗಳು ವಿದ್ಯುಕ್ತವಾಗಿ ಪ್ರಾರಂಭವಾಗುತ್ತಿವೆ. ಈಗಾಗಲೇ ಶೇ.100ರಷ್ಟು ಪಠ್ಯಪುಸ್ತಕಗಳನ್ನು ಶಾಲೆಗಳಿಗೆ ತಲುಪಿಸಲಾಗಿದೆ. ಮೇ 27 ರಿಂದ ವಿಶೇಷ ದಾಖಲಾತಿ ಆಂದೋಲನ ಪ್ರಾರಂಭವಾಗಿದ್ದು, ಮೇ31 ರವರೆಗೆ ವಿಶೇಷವಾಗಿ ಎಲ್ಲ ಗ್ರಾಮಗಳಲ್ಲಿಯೂ ದಾಖಲಾತಿ ಆಂದೋಲನ ನಡೆಸಲಾಗುವುದು. ಜೂನ್ 02 ರಿಂದ 30 ರವರೆಗೆ ಸಾಮಾನ್ಯ ದಾಖಲಾತಿ ಆಂದೋಲನ ಅನುಷ್ಠಾನ ಮಾಡಲಾಗುವುದು. ಆಯಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿ ಮಿಂಚಿನ ಸಂಚಾರದ ಆಂದೋಲನ ಹಮ್ಮಿಕೊಳ್ಳಲಿದ್ದಾರೆ. ಎಸ್‌ಎಸ್‌ಎಲ್‌ಸಿ ಫಲಿತಾಂಶ ಹೆಚ್ಚಿಸಲು ಶಾಲಾ ಪ್ರಾರಂಭದ ದಿನದಿಂದಲೇ ವಿಶೇಷ ಕ್ರಿಯಾ ಯೋಜನೆ ರೂಪಿಸಿಕೊಂಡು ವಿಶೇಷ ತರಗತಿಗಳನ್ನು ನಡೆಸಲಾಗುವುದು ಎನ್ನುತ್ತಾರೆ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಂ.ಆರ್. ಮಂಜುನಾಥ್ ಅವರು.

**ಮೆದೇಹಳ್ಳಿ ಶಾಲೆಯಲ್ಲಿ ಶಾಲಾ ಪ್ರಾರಂಭೋತ್ಸವ ಉದ್ಘಾಟನಾ ಕಾರ್ಯಕ್ರಮ:** ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ ವತಿಯಿಂದ 2025–26ನೇ ಸಾಲಿನ ಚಿತ್ರದುರ್ಗ ತಾಲ್ಲೂಕು ಮಟ್ಟದ ಶಾಲಾ ಪ್ರಾರಂಭೋತ್ಸವ ಉದ್ಘಾಟನಾ ಕಾರ್ಯಕ್ರಮ ಇದೇ ಮೇ 29 ರಂದು ಬೆಳಿಗ್ಗೆ 10ಕ್ಕೆ ಚಿತ್ರದುರ್ಗ ತಾಲ್ಲೂಕು ಮೆದೇಹಳ್ಳಿ ಸರ್ಕಾರಿ ಉನ್ನತೀಕರಿಸಿದ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಹಮ್ಮಿಕೊಳ್ಳಲಾಗಿದೆ.

ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಶಾಲಾ ಪ್ರಾರಂಭೋತ್ಸವ ಉದ್ಘಾಟಿಸುವರು. ಮೆದೇಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಕೆ.ಎನ್.ಕಾವ್ಯ ವಿಜಯಕುಮಾರ್ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿ.ಪಂ ಸಿಇಒ ಎಸ್.ಜೆ.ಸೋಮಶೇಖರ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರಾದ ಎಂ.ಆರ್. ಮಂಜುನಾಥ್, ಎಂ.ನಾಸಿರುದ್ದೀನ್, ಬಿಇಒ ಎಸ್.ನಾಗಭೂಷಣ್, ಬಿಆರ್‌ಸಿ ಈ.ಸಂಪತ್ ಕುಮಾರ್, ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಹೆಚ್.ಗುರುರಾಜ್ ಸೇರಿದಂತೆ ಮೆದೇಹಳ್ಳಿ ಗ್ರಾಮ ಪಂಚಾಯಿತಿ ಉಪಾಧ್ಯಕ್ಷರು, ಸದಸ್ಯರು, ಎಸ್‌ಡಿಎಂಸಿ ಅಧ್ಯಕ್ಷರು, ಸದಸ್ಯರು ಭಾಗವಹಿಸುವರು.

---

## ಕನ್ನಡ ಭಾಷೆ ಬಗ್ಗೆ ಅವಹೇಳಕಾರಿ ಹೇಳಿಕೆ ನೀಡಿದ ಕಮಲಹಾಸನ್ ಚಿತ್ರ ಬಹಿಷ್ಕರಿಸಲು ಒತ್ತಾಯ

» **ಚಳ್ಳಕೆರೆ**

ದಕ್ಷಿಣ ಭಾರತದ ಪ್ರಖ್ಯಾತಚಿತ್ರನಟರಲ್ಲಿ ತಮಿಳುನಾಡಿನ ಜನಪ್ರಿಯ ಚಿತ್ರನಟ ಕಮಲಹಾಸನ್ ಸಹ ಒಬ್ಬರಾಗಿದ್ದು, ತಾವು ನಟಿಸಿದ ಚಿತ್ರವೊಂದರ ಬಿಡುಗಡೆಗೆ ಸಂಬಂಧಪಟ್ಟ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ತಮಿಳಿನಿಂದಲೇ ಕನ್ನಡ ಭಾಷೆ ಹುಟ್ಟಿದೆ ಎಂಬ ಬಾಲಿಶ ಹೇಳಿಕೆಯನ್ನು ಕನ್ನಡ ಸಾಂಸ್ಕೃತಿಕ ಸಂಸ್ಥೆ ಖಂಡಿಸಿ, ಕಮಲಹಾಸನ್ ಚಿತ್ರಗಳನ್ನು ಬಹಿಷ್ಕರಿಸುವಂತೆ ಸರ್ಕಾರಕ್ಕೆ ಒತ್ತಾಯಿಸಿದೆ.

ವೇದಿಕೆ ಅಧ್ಯಕ್ಷ, ಪತ್ರಕರ್ತ ಕೊರ್ಲಕುಂಟೆ ತಿಪ್ಪೇಸ್ವಾಮಿ ಹಾಗೂ ಕನ್ನಡಾಭಿಮಾನಿಗಳು ತಹಶೀಲ್ದಾರ್‌ಗೆ ಮನವಿ ನೀಡಿ ಕಮಲಹಾಸನ್ ಹೇಳಿಕೆ ಕೋಟ್ಯಾಂತರ ಕನ್ನಡಿಗರ ಮನಸ್ಸಿಗೆ ನೋವು ತಂದಿದೆ. ತಮ್ಮ ಹೇಳಿಕೆಯನ್ನು ಅವರು ಹಿಂದಕ್ಕೆ ಪಡೆದು ಕನ್ನಡಿಗರ ಕ್ಷೇಮೆಯಾಚಿಸಬೇಕು. ಇಲ್ಲವಾದರೆ ಸರ್ಕಾರ ಅವರ ಮೇಲೆ ಪ್ರಕರಣ ದಾಖಲಿಸಿ ಕಾನೂನು ಕ್ರಮ ಜರುಗಿಸಬೇಕೆಂದು ಒತ್ತಾಯಿಸಿದರು.

ಸಿ.ಜೆ.ತಿಪ್ಪೇಸ್ವಾಮಿ, ಪೆನ್ನೋಬಳಯ್ಯ, ಹರೀಶ್, ಎಚ್.ಎಸ್.ಸೈಯದ್, ವಿ.ಬೆಟ್ಟಪ್ಪ, ಎಚ್.ಲಂಕೇಶ್, ಎನ್.ತಿಪ್ಪೇಸ್ವಾಮಿ, ರವಿಕುಮಾರ್, ಕೆ.ಬಿ.ನಾಗರಾಜು, ಈ.ರಂಗಸ್ವಾಮಿ, ವಿಜಯಪ್ಪ, ಜಾನ್‌ಕುಮಾರ್ ಮುಂತಾದವರು ಉಪಸ್ಥಿತರಿದ್ದರು.



ಚಳ್ಳಕೆರೆ ನಗರದ ತಾಲ್ಲೂಕು ಕಚೇರಿಯಲ್ಲಿ ಬುಧವಾರ ಚಿತ್ರನಟ ಕಮಲಹಾಸನ್ ವಿರುದ್ಧ ಕ್ರಮಕೈಗೊಳ್ಳಬೇಕೆಂದು ಒತ್ತಾಯಿಸಿ ಕನ್ನಡ ಸಾಂಸ್ಕೃತಿಕ ಸಂಸ್ಥೆ ತಹಶೀಲ್ದಾರ್‌ಗೆ ಮನವಿ ನೀಡಿದರು.

---

**ಪ್ರಮುಖ ಸುದ್ದಿ**

# ಪೌರನೌಕರರ ಬೇಡಿಕೆ ಈಡೇರಿಸಲು ಸರ್ಕಾರ ನಿರ್ಲಕ್ಷ್ಯ

### ಸರ್ಕಾರದ ನೀತಿ ಖಂಡಿಸಿ ಅನಿರ್ದಿಷ್ಟವಾದಿ ಮುಷ್ಕರ –ಸರ್ಕಾರ ಪೌರನೌಕರರ ಜೀವನದೊಂದಿಗೆ ಚೆಲ್ಲಾಟ: ಇ.ತಿಪ್ಪೇಸ್ವಾಮಿ

» **ಚಳ್ಳಕೆರೆ**

ಕಳೆದ ಹಲವಾರು ವರ್ಷಗಳಿಂದ ಪೌರನೌಕರರ ಬೇಡಿಕೆ ಈಡೇರಿಸುವಲ್ಲಿ ರಾಜ್ಯ ಸರ್ಕಾರ ವಿಫಲವಾದ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯ ಪೌರನೌಕರರ ಸಂಘದ ರಾಜ್ಯಾಧ್ಯಕ್ಷರ ಸೂಚನೆಯಂತೆ ಮೇ.27 ರಿಂದ ಅನಿರ್ದಿಷ್ಟಾಕಾಲ ಮುಷ್ಕರವನ್ನು ಪೌರನೌಕರರ ಸಂಘ ಹಮ್ಮಿಕೊಂಡಿದ್ದು ಸಾರ್ವಜನಿಕರು ಸಹಕರಿಸುವಂತೆ ಪೌರನೌಕರರ ಸಂಘದ ತಾಲ್ಲೂಕು ಅಧ್ಯಕ್ಷ ಇ.ತಿಪ್ಪೇಸ್ವಾಮಿ ಮನವಿ ಮಾಡಿದ್ದಾರೆ.

ಅವರು, ನಗರಸಭೆ ಕಾರ್ಯಾಲಯದ ಮುಂಭಾಗದಲ್ಲಿ ಸರ್ಕಾರದ ವಿರುದ್ಧ ಹಮ್ಮಿಕೊಂಡಿದ್ದ ಪ್ರತಿಭಟನೆಯಲ್ಲಿ ಭಾಗವಹಿಸಿ ಮಾತನಾಡಿದರಲ್ಲದೆ, ಕರ್ನಾಟಕ ರಾಜ್ಯ ಪೌರನೌಕರರ ಸಂಘದ ರಾಜ್ಯಾಧ್ಯಕ್ಷರೂ ಸೇರಿದಂತೆ ಎಲ್ಲಾ ಪದಾಧಿಕಾರಿಗಳು ಮುಖ್ಯಮಂತ್ರಿ, ಉಪಮುಖ್ಯಮಂತ್ರಿ, ಪೌರಾಡಳಿತ ಸಚಿವ ಮತ್ತು ಸರ್ಕಾರದ ಪೌರಾಡಳಿತ ಅಧಿಕಾರಿಗಳಿಗೆ ಲಿಖಿತ ಮೂಲಕ ಮನವಿ ನೀಡಿ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿದ್ದರೂ ಸರ್ಕಾರ ಮಾತ್ರ ಈ ಬಗ್ಗೆ ಯಾವುದೇ ಕ್ರಮ ಕೈಗೊಳ್ಳದೇ ಇರುವುದು ಪೌರನೌಕರರ ಅಸಮದಾನಕ್ಕೆ ಕಾರಣವಾಗಿದೆ. ಅನಿವಾರ್ಯವಾಗಿ ಸರ್ಕಾರದ ವಿರುದ್ಧ ಬೀದಿಗಿಳಿದು ಪ್ರತಿಭಟನೆ ಮಾಡಲಾಗುತ್ತಿದ್ದು, ಬೇಡಿಕೆ ಈಡೇರುವತನಕ ಹೋರಾಟ ಮುಂದುವರೆಯಲಿದೆ ಎಂದರು.



ಹೊರಗುತ್ತಿಗೆನೌಕರರ ಸಂಘ ಸಹ ಮುಷ್ಕರಕ್ಕೆ ಬೆಂಬಲ ನೀಡಿದ್ದು ಅವರ ಬೇಡಿಕೆಗಳನ್ನೂ ಸಹ ಈಡೇರಿಸುವಂತೆ ಸರ್ಕಾರಕ್ಕೆ ಒತ್ತಾಯಿಸಿದೆ. ಪ್ರಮುಖವಾಗಿ ಪೌರನೌಕರರನ್ನು ರಾಜ್ಯ ಸರ್ಕಾರಿ ನೌಕರರು ಎಂದು ಕೂಡಲೇ ಪರಿಗಣಿಸಿ, ಸರ್ಕಾರಿ ನೌಕರರಿಗೆ ನೀಡುವ ಎಲ್ಲಾ ಸೌಲಭ್ಯವನ್ನು ತಕ್ಷಣೆ ಜಾರಿಬರುವಂತೆ ನೀಡಬೇಕು, ಸುಮಾರು 30 ವರ್ಷಗಳಿಂದ ಹೊರಗುತ್ತಿಗೆ ಪೌರಕಾರ್ಮಿಕರಾಗಿ ಕಾರ್ಯನಿರ್ವಹಿಸುವ ಎಲ್ಲಾ ನೌಕರರಿಗೆ ಖಾಯಂಗೊಳಿಸಿ ಸೌಲಭ್ಯ ನೀಡಬೇಕು, ಕಾಲಕಾಲಕ್ಕೆ ಸರಿಯಾಗಿ ಬಡ್ತಿ ನೀಡಬೇಕೆಂಬ ಬೇಡಿಕೆ ಸೇರಿದಂತೆ ಹಲವಾರು ಬೇಡಿಕೆ ಈಡೇರಿಕೆಗೆ ಮನವಿ ಮಾಡಲಾಗಿದೆ ಎಂದರು.

ಪುಟ 2

## ಫಾಸ್ಟ್ ನ್ಯೂಸ್

### ಪೌರನೌಕರರ ಬೇಡಿಕೆ ಈಡೇರಿಸಲು ಸರ್ಕಾರ ನಿರ್ಲಕ್ಷ್ಯ

» ಮೊದಲ ಪುಟದಿಂದ

ಮುಷ್ಕರದಲ್ಲಿ ಕಂದಾಯಾಧಿಕಾರಿ ಸತೀಶ್, ವ್ಯವಸ್ಥಾಪಕ ಲಿಂಗರಾಜು, ಉಪಾಧ್ಯಕ್ಷ ಎಚ್.ಟಿ.ಮಹಲಿಂಗಪ್ಪ, ಪ್ರಧಾನ ಕಾರ್ಯದರ್ಶಿ ಟಿ.ಎನ್.ವಿಶ್ವನಾಥ, ಗೌರವಾಧ್ಯಕ್ಷ ಎನ್.ತಿಪ್ಪೇಸ್ವಾಮಿ, ಸಂಘಟನಾ ಕಾರ್ಯದರ್ಶಿ ಎಸ್.ವೀರಭದ್ರಪ್ಪ, ಜಂಟಿಕಾರ್ಯದರ್ಶಿ ಓ.ಮಂಜುನಾಥ, ನಿರ್ದೇಶಕರಾದ ಡಿ.ಭಾಸ್ಕರ್, ಆರ್.ಚೇತನ್, ಕೆ.ಗಿರೀಶ್, ಬಕ್ಷಿಸಾಬ್, ಕೆ.ವೀರೇಶ್, ಸುವರ್ಣಮ್ಮ, ಕಾನೂನು ಸಲಹೆಗಾರಾದ ಎಚ್.ಟಿ.ಲಿಂಗರಾಜು, ಕೆ.ಗುರುಪ್ರಸಾದ್, ಓಬಳೇಶ್, ಭೋರಯ್ಯ, ಗಣೇಶ್, ಸತೀಶ್, ಎಸ್.ಎಲ್.ಮಂಜಣ್ಣ, ಪ್ರಸನ್ನಕುಮಾರ್, ಮಹೇಶ್, ಹೊರಗುತ್ತಿಗೆ ನೌಕರರ ಸಂಘದ ಅಧ್ಯಕ್ಷ ಶ್ರೀನಿವಾಸ್, ಉಪಾಧ್ಯಕ್ಷ ಪೆನ್ನೇಶ್ ಭಾಗವಹಿಸಿದ್ದರು.

### ಜೀವಿ ಮಂಗಳಮ್ಮ ನಿಧನ: ಸಂತಾಪ

» ಚಳ್ಳಕೆರೆ

ಗಾಂಧಿನಗರದ ಸೋಮಗುದ್ದು ರಸ್ತೆಯ ನಿವಾಸಿ, ಮಡಿವಾಳ ಸಮಾಜದ ಹಿರಿಯ ಮುಖಂಡ ರಂಗಧಾಮಪ್ಪನವರ ಪತ್ನಿ ಮಂಗಳಮ್ಮ(57)



ಮಂಗಳವಾರ ತಡರಾತ್ರಿ ಅನಾರೋಗ್ಯ ಹಿನ್ನೆಲೆಯಲ್ಲಿ ನಿಧನರಾದರು. ತಾಲ್ಲೂಕಿನ ಹರವಿಗೊಂಡನಹಳ್ಳಿ ಗ್ರಾಮದ ರುದ್ರಭೂಮಿಯಲ್ಲಿ ಅವರ ಅಂತ್ಯಕ್ರಿಯೆ ಬುಧವಾರ ಸಂಜೆ ನಡೆಯಿತು. ಮೃತರು ಇಬ್ಬರು ಪುತ್ರರು, ಇಬ್ಬರು ಪುತ್ರಿಯರು, ಮೊಮ್ಮಕ್ಕಳು ಹಾಗೂ ಅಪಾರ ಬಂಧುಬಳಗವನ್ನು ಅಗಲಿದ್ದಾರೆ. ಮಂಗಳಮ್ಮನ ನಿಧನಕ್ಕೆ ತಾಲ್ಲೂಕು ಮಡಿವಾಳ ಸಂಘ ಶೋಕ ವ್ಯಕ್ತಪಡಿಸಿದೆ.

### ಎನ್‌ಎಸ್‌ಪಿ ಪೋರ್ಟನಲ್ಲಿ ಒಟಿಆರ್ ಸಂಖ್ಯೆಯನ್ನು ಸೃಜಿಸಿ

» ದಾವಣಗೆರೆ

ಪ್ರಸಕ್ತ ಸಾಲಿನಿಂದ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಂದ ಮೆಟ್ರಿಕ್ ಪೂರ್ವ 9 ಮತು 10 ನೇ ತರಗತಿ ಹಾಗೂ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ವಿದ್ಯಾರ್ಥಿವೇತನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. ರಾಷ್ಟ್ರೀಯ ಸ್ಕಾಲರ್‌ಶಿಪ್ ಪೋರ್ಟಲ್‌ನಲ್ಲಿ ಒನ್‌ಟೈಂ ಪಾಸ್‌ವರ್ಡ್ ಸೃಜನೆ ಮಾಡಿ ನೊಂದಣಿ ಮಾಡಿದ ನಂತರ ರಾಜ್ಯ ವಿದ್ಯಾರ್ಥಿ ವೇತನದ ತಂತ್ರಾಂಶದಲ್ಲಿ ಎಸ್‌ಎಸ್‌ಪಿ ಅರ್ಜಿ ಸಲ್ಲಿಸಬೇಕೆಂದು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ತಿಳಿಸಿದ್ದಾರೆ.

### 6ನೇ ತರಗತಿ ಪ್ರವೇಶ: ಅರ್ಹ ವಿದ್ಯಾರ್ಥಿಗಳಿಗೆ ಕೌನ್ಸಿಲಿಂಗ್

» ದಾವಣಗೆರೆ

ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು, ಸರ್ಕಾರಿ ಮುಸ್ಲಿಂ ವಸತಿ ಶಾಲೆಗಳು ಹಾಗೂ ಡಾ॥ಎ.ಪಿ.ಜೆಅಬ್ದುಲ್ ಕಲಾಂ ವಸತಿ ಶಾಲೆಗಳಲ್ಲಿ 6ನೇ ತರಗತಿ ಪ್ರವೇಶಕ್ಕಾಗಿ ಪರೀಕ್ಷೆ ಬರೆದು ಆಯ್ಕೆಯಾದ ಅರ್ಹ ವಿದ್ಯಾರ್ಥಿಗಳಿಗೆ ಮೇ.30 ರಂದು ಜಿಲ್ಲಾಡಳಿತ ಭವನ, ತುಂಗಭದ್ರ ಸಭಾಂಗಣದಲ್ಲಿ ಕೌನ್ಸೆಲಿಂಗ್ ನಡೆಸಲಾಗುವುದು. ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಬೆಳಿಗ್ಗೆ 10.00 ರಿಂದ 1.30ರವರೆಗೆ ಮತ್ತು ಇತರೆ ವಿದ್ಯಾರ್ಥಿಗಳಿಗೆ ಮಧ್ಯಾಹ್ನ 2.30 ರಿಂದ 5 ಗಂಟೆಯವರೆಗೆ ದಾಖಲಾತಿ ಪಡೆಯಲು ಕೌನ್ಸೆಲಿಂಗ್‌ಗೆ ಹಾಜರಾಗಬೇಕು. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 08192–250022 ಸಂಪರ್ಕಿಸಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅಧಿಕಾರಿ ತಿಳಿಸಿದ್ದಾರೆ.

### ಹಣಕಾಸು ಆಯೋಗ ಸಭೆ

» ದಾವಣಗೆರೆ

ಜೂನ್ 2 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿರುವ ಎಸ್.ಎಸ್ ಮಲ್ಲಿಕಾರ್ಜುನ್ ಸಭಾಂಗಣದಲ್ಲಿ 5ನೇ ರಾಜ್ಯ ಹಣಕಾಸು ಆಯೋಗದ ಸಭೆಯನ್ನು ಆಯೋಜಿಸಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಸುರೇಶ್.ಬಿ.ಇಟ್ನಾಳ್ ತಿಳಿಸಿದ್ದಾರೆ.

### ಮೇ.30 ರಿಂದ ಶಾಲಾ ಪ್ರಾರಂಭೋತ್ಸವ

» ದಾವಣಗೆರೆ

ಶಾಲಾ ಶಿಕ್ಷಣ ಇಲಾಖೆ ಮಾರ್ಗಸೂಚಿಯನ್ವಯ ಮೇ.29 ರಂದು ಶಾಲಾ ಮುಖ್ಯ ಶಿಕ್ಷಕರು ಹಾಗೂ ಸಹ ಶಿಕ್ಷಕರು ಶಾಲೆಗಳಿಗೆ ಹಾಜರಾಗಿ ಶಾಲಾ ಪ್ರಾರಂಭೋತ್ಸವವನ್ನು ಕೈಗೊಳ್ಳಲು ಅಗತ್ಯ ಪೂರ್ವ ಸಿದ್ಧತೆಗಳನ್ನು ಮಾಡಿಕೊಂಡು ಮೇ.30 ರಿಂದ ಶಾಲಾ ಮಕ್ಕಳ ಪ್ರವೇಶ, ದಾಖಲಾತಿ ಪ್ರಕ್ರಿಯೆ ಹಾಗೂ ಪ್ರಾರಂಭೋತ್ಸವವನ್ನು ಕೈಗೊಳ್ಳಬೇಕೆಂದು ಡಿಡಿಪಿಐ ಕೊಟ್ರೇಶ್ ತಿಳಿಸಿದ್ದಾರೆ.

---

#### ತಜ್ಞ ಶಾಂತವೀರಯ್ಯ ಹೇಳಿಕೆ

# ಜೇನು ಕೃಷಿಯಿಂದ ಉತ್ತಮ ಇಳುವರಿ ಸಾಧ್ಯ

» ಚಿತ್ರದುರ್ಗ

ಜೇನು ಕೃಷಿಯಿಂದ ಉತ್ತಮ ಇಳುವರಿ ಪಡೆಯಲು ಸಾಧ್ಯವಿದೆ ಎಂದು ಜೇನು ತಜ್ಞ ಹಾಗೂ ನಿವೃತ್ತ ಸಹಾಯಕ ಕೃಷಿ ನಿರ್ದೇಶಕ ಶಾಂತವೀರಯ್ಯ ಹೇಳಿದರು.

ತಾಲ್ಲೂಕಿನ ಬಬ್ಬೂರಿನ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಸೋಮವಾರ ಜರುಗಿದ ಸಮಗ್ರ ಜೇನು ಕೃಷಿ ತಾಂತ್ರಿಕತೆ ಕುರಿತು ಆಯೋಜಿಸಲಾಗಿದ್ದ 2 ದಿನಗಳ ಕಾಲ ರೈತರ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.





ಜಗತ್ತಿನ ಶೇ 90ಕ್ಕಿಂತ ಹೆಚ್ಚಿನ ವಿವಿಧ ಜಾತಿಯ ಸಸ್ಯಗಳಿಗೆ ಜೇನು ನೊಣಗಳಿಂದ ಪರಾಗಸ್ಪರ್ಷವಾಗುತ್ತದೆ. ಪ್ರತಿ ಎಕರೆಗೆ 2–4 ಜೇನು ಪೆಟ್ಟಿಗೆಗಳನ್ನು ಇಡುವುದರಿಂದ ಅಡಿಕೆ ಮತ್ತು ತೆಂಗಿನ ಬೆಳೆಗಳಲ್ಲಿ ಉತ್ತಮ ಇಳುವರಿ ಪಡೆಯಲು ಸಾಧ್ಯವಿದೆ. ಸೂರ್ಯಕಾಂತಿ ಬೆಳೆಯಲ್ಲಿ ಶೇ.70 ಹಾಗೂ ಕುಂಬಳ ಜಾತಿಯ ಬೆಳೆಗಳಲ್ಲಿ ಶೇ 80 ರಿಂದ 90 ಕ್ಕಿಂತ ಅಧಿಕ ಇಳುವರಿ ಪಡೆಯಲು ಜೇನು ಕೃಷಿ ಸಹಕಾರಿಯಾಗಿದೆ ಎಂದರು.

ಕೃಷಿಯ ಉತ್ಪಾದನೆ ಹೆಚ್ಚಿಸುವುದಲ್ಲದೆ, ಜೇನು ತುಪ್ಪವು ಆರೋಗ್ಯದ ದೃಷ್ಟಿಯಲ್ಲಿ ಅಮೃತ ಸಮಾನವಾಗಿದ್ದು, ಅಸ್ತಮಾ, ಸಂಧಿವಾತ ಕಾಯಿಲೆ ನೀವಾರಿಸಲು, ದೇಹದ ಬೊಜ್ಜು ಕರಗಿಸಲು ಮತ್ತು ಮಕ್ಕಳಲ್ಲಿ ರೋಗ ನಿರೋಧಕ ಶಕ್ತಿ ಮತ್ತು ಬುದ್ದಿವಂತಿಕೆಯನ್ನು ಹೆಚ್ಚಿಸಲು ಸಹಕಾರಿಯಾಗಿದೆ. ಜೇನು ತುಪ್ಪದಲ್ಲಿ ಶರೀರಕ್ಕೆ ಬೇಕಾಗುವ ಪೋಷಕಾಂಶಗಳು ರಕ್ತಗತವಾದ ರೂಪದಲ್ಲಿ ದೊರೆಯುತ್ತವೆ ಎಂದು ತಿಳಿಸಿದರು.ಜೇನು ಕುಟುಂಬವು ಒಗ್ಗಟ್ಟಿನಿಂದ ದುಡಿಯುವುದನ್ನು ನೋಡಿ ನಾವು ಸಹ ಕಲಿಯುವುದು ಬಹಳವಿದೆಂದರು. ಜೇನು ಕೃಷಿಯಿಂದ ಜೇನು ತುಪ್ಪವಲ್ಲದೆ, ಜೇನು ಮೇಣ, ಜೇನಿನ ವಿಷ, ರಾಜಶಾಯಿ ರಸ, ಜೇನಿನ ಪರಾಗ, ಜೇನಿನ ಅಂಟನ್ನು ಉಪುತ್ಪನ್ನಗಳನ್ನಾಗಿ ಸಹ ಪಡೆಯಬಹುದೆಂದು ಹೇಳಿದರು.

ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಮುಖ್ಯಸ್ಥ ರಜನೀಕಾಂತ ಮಾತನಾಡಿ, ಜೇನು ಕೃಷಿಯು ಪರಿಸರ ಸ್ನೇಹಿ ಹಾಗೂ ಕಡಿಮೆ ಬಂಡವಾಳದ ಉಪಕಸುಬಾಗಿದೆ. ತನ್ನ ಪರಾಗಸ್ಪರ್ಶ ಕ್ರಿಯೆಯಿಂದ ರೈತರ ಬೆಳೆಗಳ ಉತ್ಪಾದನೆ ಹೆಚ್ಚಿಸುವಲ್ಲಿ ಮತ್ತು ಜೀವರಾಶಿಗಳ ಸಮತೋಲನ ಕಾಪಾಡುವಲ್ಲಿ ತುಂಬ ಪ್ರಾಮುಖ್ಯತೆ ಹೊಂದಿದೆ. ರೈತ ಬಾಂಧವರು ಇಂದಿನ ತರಬೇತಿಯ ಸದುಪಯೋಗ ಪಡೆದುಕೊಂಡು ಕನಿಷ್ಟ 2 ಜೇನು ಪಟ್ಟಿಗೆಯಿಂದ ಜೇನು ಕೃಷಿಯನ್ನು ಪ್ರಾರಂಭಿಸಲು ಸಲಹೆ ನೀಡಿದರು.

ನಿವೃತ್ತ ಮೂಖ್ಯ ಇಂಜಿನಿಯರ್ ರವೀದ್ರಪ್ಪ ಮಾತನಾಡಿ, ತೋಟಗಾರಿಕೆ ಬೆಳೆಗಳಲ್ಲಿ ಇಳುವರಿ ಹೆಚ್ಚಿಸುವಲ್ಲಿ ಜೇನು ಕೃಷಿ ಸಹಕಾರಿಯಗಿದೆಯಲ್ಲದೆ, ರೈತರ ಆದಾಯವನ್ನು ಹೆಚ್ಚಿಸುತ್ತದೆ. ಆದ ಪ್ರಯುಕ್ತ ರೈತರು ಜೇನು ಕೃಷಿಯನ್ನು ಸಮಗ್ರ ಕೃಷಿ ಪದ್ಧತಿಯ ಭಾಗವಾಗಿತಮ್ಮ ತಾಕಿನಲ್ಲಿ ಅಳವಡಿಸಿಕೊಳ್ಳುವಂತೆ ತಿಳಿಸಿದರು.

ತಾಂತ್ರಿಕ ತರಬೇತಿ ಅಂಗವಾಗಿ ಮಂಗಳವಾರದ ದಿನ ಮೇಟಿಕುರ್ಕೆಯ ಚಂದನ ಮಧುವನ ತೋಟದ ಜೇನು ಕೃಷಿ ತರಬೇತಿ ಘಟಕಕ್ಕೆ ಭೇಟಿ ನೀಡಿ ರೈತರಿಗೆ ಜೇನು ಪೆಟ್ಟಿಗೆಯ ನಿರ್ವಹಣೆಯ ಪ್ರಾಯೋಗಿಕ ವಿವರ, ಜೇನು ನೊಣದ ಜೀವನ ಚರಿತ್ರೆ, ಜೇನು ಕಟುಂಬದಲ್ಲಿ ರಾಣಿ ಜೇನು, ಗಂಡು ಜೇನು ನೊಣ ಮತ್ತು ಕೆಲಸಗಾರರ ಪಾತ್ರ ಮತ್ತು ಗುರುತಿಸುವಿಕೆ, ಜೇನು ಕಟುಂಬದ ವಿಭಜನೆ ಮಾಡುವ ರೀತಿ,ಜೇನಿನ ಉಪ ಉತ್ಪನ್ನಗಳು, ಜೇನು ತುಪ್ಪ ತೆಗೆಯುವ ರೀತಿ ಕುರಿತು ಸಮಗ್ರವಾಗಿ ಪ್ರಾತ್ಯಕಿಕೆಯನ್ನು ನೀಡಲಾಗಿದೆ. ಜೇನು ಕೃಷಿಯ ಯಶಸ್ವಿ ಅಳವಡಿಕೆಗೆ ತರಬೇತಿಯಲ್ಲಿ ಭಾಗವಹಿಸಿದ ರೈತರ ಆಸಕ್ತ ಜೇನು ಕೃಷಿಕರ ವ್ಯಾಟ್ಸಆಪ್ ಗುಂಪನ್ನು ರಚಿಸಿ ಜೇನು ಕೃಷಿ ಪ್ರೋತ್ಸಾಹ ನೀಡಲಾಗುತ್ತಿದೆ.

---

# 3ನೆ ದಿನಕ್ಕೆ ಪೌರ ಕಾರ್ಮಿಕರ ಮುಷ್ಕರ

» ಚಿತ್ರದುರ್ಗ

ಪೌರ ಕಾರ್ಮಿಕರನ್ನು ಖಾಯಂಗೊಳಿಸುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಪೌರ ನೌಕರರು ನಡೆಸುತ್ತಿರುವ ಅನಿರ್ಧಿಷ್ಟಾವಧಿ ಮುಷ್ಕರ ಬುಧವಾರ ಮೂರನೆ ದಿನಕ್ಕೆ ಕಾಲಿಟ್ಟಿದೆ.



ಚಿತ್ರದುರ್ಗ ತಾಲ್ಲೂಕು ಪೌರ ನೌಕರರು ಹಾಗೂ ಪೌರ ಕಾರ್ಮಿಕರು ನಗರಸಭೆ ಮುಂಭಾಗದ ಗೇಟ್ ಬಂದ್ ಮಾಡಿ ರಸ್ತೆಯಲ್ಲಿಯೇ ಮುಷ್ಕರ ಆರಂಭಿಸಿದ್ದಾರೆ.

ಹೊರ ಗುತ್ತಿಗೆ ಪದ್ದತಿಯನ್ನು ನಿಲ್ಲಿಸಿ ಪೌರ ಕಾರ್ಮಿಕರನ್ನು ಖಾಯಂಗೊಳಿಸಬೇಕು. ನೀರು ಸರಬರಾಜುದಾರರು ಹಾಗೂ ವಾಹನ ಚಾಲಕರುಗಳು ಜೀವನ ಭದ್ರತೆಯಿಲ್ಲದೆ ಅನೇಕ ವರ್ಷಗಳಿಂದಲೂ ಕೆಲಸ ಮಾಡುತ್ತಿದ್ದು, ಸರ್ಕಾರಿ ನೌಕರರೆಂದು ಪರಿಗಣಿಸಬೇಕು.

ಅಲ್ಲಿಯತನಕ ಮುಷ್ಕರದಿಂದ ಹಿಂದೆ ಸರಿಯುವುದಿಲ್ಲವೆಂದು ಪೌರ ಕಾರ್ಮಿಕರು ಆಕ್ರೋಶ ವ್ಯಕ್ತಪಡಿಸಿದರು.

ಪೌರ ನೌಕರರ ಸಂಘದ ತಾಲ್ಲೂಕು ಅಧ್ಯಕ್ಷೆ ರೇಣುಕ ಮಾತನಾಡಿ ಬೆಂಗಳೂರಿನ ಬಿ.ಬಿ.ಎಂ.ಪಿ.ಯಲ್ಲಿರುವ ಪೌರ ಕಾರ್ಮಿಕರನ್ನು ಮಾತ್ರ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಖಾಯಂಗೊಳಿಸಿದ್ದು, ನಗರಪಾಲಿಕೆ, ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿಯಲ್ಲಿ ಕೆಲಸ ಮಾಡುತ್ತಿರುವ ಪೌರ ಕಾರ್ಮಿಕರು ಹಾಗೂ ಪೌರ ನೌಕರರನ್ನು ನಿರ್ಲಕ್ಷಿಸಿರುವುದು ಯಾವ ನ್ಯಾಯ? ಪೌರ ಕಾರ್ಮಿಕರಿಗೆ ಪ್ರತಿ ತಿಂಗಳು ವೇತನ ಸಿಗುತ್ತಿಲ್ಲ. ಇದರಿಂದ ಕುಟುಂಬದ ನಿರ್ವಹಣೆ ಕಷ್ಟವಾಗಿದೆ. ಜ್ಯೋತಿ ಸಂಜೀವಿನಿ ಯೋಜನೆ ಪೌರ ಕಾರ್ಮಿಕರಿಗೆ ಸಿಗಬೇಕು. ಗುತ್ತಿಗೆ ಹೊರ ಗುತ್ತಿಗೆ ಬದಲು ನೇರ ಪಾವತಿಯಾಗಬೇಕೆಂದು ಒತ್ತಾಯಿಸಿದರು.

ವಾಲ್‌ಮನ್‌ಗಳು,ನೀರುಸರಬರಾಜುದಾರರು, ಹೆಲ್ತ್‌ಇನ್ಸ್‌ಪೆಕ್ಟರ್‌ಗಳು ಮುಷ್ಕರದಲ್ಲಿ ಪಾಲ್ಗೊಂಡಿದ್ದರು.

ನಗರಸಭೆ ಉಪಾಧ್ಯಕ್ಷೆ ಶ್ರೀದೇವಿ ಚಕ್ರವರ್ತಿ ಮುಷ್ಕರದಲ್ಲಿ ಭಾಗವಹಿಸಿ ಪೌರ ಕಾರ್ಮಿಕರಿಗೆ ಬೆಂಬಲ ಸೂಚಿಸಿದರು.ಕರ್ನಾಟಕ ದಲಿತ ಸಂಘರ್ಷ ಸಮಿತಿ ಜಿಲ್ಲಾಧ್ಯಕ್ಷ ಸಿ.ಹೆಚ್.ಮಂಜುನಾಥ್, ಜಗದೀಶ್ ಇನ್ನು ಅನೇಕರು ಪೌರ ಕಾರ್ಮಿಕರ ಜೊತೆ ಮುಷ್ಕರದಲ್ಲಿದ್ದರು.

---

## ಕೋವಿಡ್-19 ಜನರು ಆತಂಕಪಡುವ ಅಗತ್ಯವಿಲ್ಲ, ಮುನ್ನೆಚ್ಚರಿಕೆ ವಹಿಸಿ: ಡಿಸಿ

» ದಾವಣಗೆರೆ

ಕಳೆದ 1 ತಿಂಗಳಿನಿಂದ ರಾಜ್ಯದಲ್ಲಿ ಕೋವಿಡ್ ಪ್ರಕರಣಗಳು ಹೆಚ್ಚಿನ ಸಂಖ್ಯೆಯಲ್ಲಿ ವರದಿಯಾಗುತ್ತಿದ್ದು, ಜಿಲ್ಲೆಯ ಸಾರ್ವಜನಿಕರು ಯಾವುದೇ ಆತಂಕ ಪಡುವ ಅಗತ್ಯವಿರುವುದಿಲ್ಲ.

ಇದು ಸೌಮ್ಯ ಸ್ವಭಾವದ ಸೋಂಕು ಆಗಿರುತ್ತದೆ ಎಂದು ತಜ್ಞರು ಅಭಿಪ್ರಾಯ ಪಟ್ಟಿರುತ್ತಾರೆ. ಆದುದರಿಂದ ಮುಂಜಾಗ್ರತಾ ಕ್ರಮವಾಗಿ ಜಿಲ್ಲಾ ಆಸ್ಪತ್ರೆ ಮತ್ತು ತಾಲ್ಲೂಕು ಸಾರ್ವಜನಿಕ ಆಸ್ಪತ್ರೆಗಳಲ್ಲಿ ಬೆಡ್ ಹಾಗೂ ಆಕ್ಸಿಜನ್ ವ್ಯವಸ್ಥೆ, ಅತ್ಯವಶ್ಯಕ ಔಷಧಿಗಳು, ಐ.ಸಿ.ಯು ಮುಂತಾದ ಎಲ್ಲಾ ವ್ಯವಸ್ಥೆಗಳನ್ನು ಮಾಡಿಕೊಳ್ಳಲಾಗಿದೆ. ಆಸ್ಪತ್ರೆಗಳಲ್ಲಿ ಒಳರೋಗಿಗಳಾಗಿ ಚಿಕಿತ್ಸೆ ಪಡೆಯುತ್ತಿರುವ ತೀವ್ರ ತರಹದ ಶ್ವಾಸಕೋಶದ ಸೋಂಕು ಇರುವ ರೋಗಿಗಳು, 60 ವರ್ಷ ಮೇಲ್ಪಟ್ಟ ಮತ್ತು ಇತರೆ ಧೀರ್ಘಕಾಲಿನ ಕಾಯಿಲೆಗಳು ಇರುವ ವ್ಯಕ್ತಿಗಳು 1 ವರ್ಷದ ಒಳಗಿನ ಮಕ್ಕಳು ಹಾಗೂ ಲಕ್ಷಣಗಳು ಇರುವ ಗರ್ಭಿಣಿಯರಿಗೆ ಕೋವಿಡ್ ಪರೀಕ್ಷೆ ಮಾಡಿಸಬೇಕು.

ಶೀತ, ಜ್ವರ, ಕೆಮ್ಮು ಈ ತರಹದ ಲಕ್ಷಣಗಳು ಇದ್ದಲ್ಲಿ ಜನದಟ್ಟಣೆ ಇರುವ ಪ್ರದೇಶಗಳಲ್ಲಿ ಮುಂಜಾಗ್ರತಾ ಕ್ರಮವಾಗಿ ಮಾಸ್ಕ್ ಧರಿಸಲು ಮತ್ತು ಕೂಡಲೇ ಸಮೀಪದ ಸರ್ಕಾರಿ ಆಸ್ಪತ್ರೆಗಳಿಗೆ ಭೇಟಿ ನೀಡಿ ಅಗತ್ಯ ತಪಾಸಣೆ ಮತ್ತು ಔಷಧೋಪಚಾರ ಪಡೆಯುವಂತೆ ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ತಿಳಿಸಿದ್ದಾರೆ.

---

#### ಸಾಮಾನ್ಯ ಸಭೆಯಲ್ಲಿ ಚಿತ್ರದುರ್ಗ ತಾ.ಪಂ. ಆಡಳಿತಾಧಿಕಾರಿ ಬಿ.ಆನಂದ್ ಸೂಚನೆ

## ತಾಲೂಕಿನಲ್ಲಿ ಕೋವಿಡ್ ಮುಂಜಾಗ್ರತೆಕ್ರಮಕೈಗೊಳ್ಳಿ



» ಚಿತ್ರದುರ್ಗ

ರಾಜ್ಯದಲ್ಲಿ ಕರೋನಾ ವೈರಸ್ ಸೋಂಕಿತರ ಸಂಖ್ಯೆ ಹೆಚ್ಚಾಗುತ್ತಿದ್ದು, ಈ ಕುರಿತು ಸರ್ಕಾರದಿಂದ ಕಟ್ಟುನಿಟ್ಟಾಗಿ ಮಾರ್ಗಸೂಚಿ ಹೊರಡಿಸಿದ್ದು, ಕೋವಿಡ್ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವಂತೆ ಚಿತ್ರದುರ್ಗ ತಾಲ್ಲೂಕು ಪಂಚಾಯಿತಿ ಆಡಳಿತಾಧಿಕಾರಿ ಬಿ.ಆನಂದ್ ಆರೋಗ್ಯ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ನಗರದ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಮಂಗಳವಾರ ನಡೆದ ಚಿತ್ರದುರ್ಗ ತಾಲ್ಲೂಕು ಪಂಚಾಯಿತಿಯ ಮೊದಲನೇ ಸಾಮಾನ್ಯ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಮುಂಗಾರು ಉತ್ತಮ ರೀತಿಯಲ್ಲಿ ಆಗಿದ್ದು, ರೈತರಿಗೆ ಯಾವುದೇ ತೊಂದರೆ ಆಗದಂತೆ ಉತ್ತಮ ಗುಣಮಟ್ಟದ ಬಿತ್ತನೆ ಬೀಜ ವಿತರಿಸಲು ಕೃಷಿ ಇಲಾಖೆ ವತಿಯಿಂದ ಅಗತ್ಯ ಕ್ರಮವಹಿಸಲು ತಿಳಿಸಿದರು. ತೋಟಗಾರಿಕೆ ಇಲಾಖೆ, ರೇಷ್ಮೆ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಪಶುಪಾಲನಾ ಇಲಾಖೆ, ಶಿಕ್ಷಣ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನೆ ನಡೆಸಿದರು. ಸಭೆಯಲ್ಲಿ ಚಿತ್ರದುರ್ಗ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ವೈ.ರವಿಕುಮಾರ್, ಯೋಜನಾಧಿಕಾರಿ ರಾಘವೇಂದ್ರ, ಲೆಕ್ಕಾಧಿಕಾರಿ ಕಂಚಪ್ಪ ಸೇರಿದಂತೆ ವಿವಿಧ ಇಲಾಖೆಗಳ ತಾಲ್ಲೂಕು ಮಟ್ಟದ ಅಧಿಕಾರಿಗಳು ಇದ್ದರು.

---


## ಪ್ರಮುಖ ಸುದ್ದಿ

#### ನಗರಸಭೆ ತುರ್ತು ಕೌನ್ಸಿಲ್ ಸಭೆ

# ತ್ಯಾಜ್ಯ ನಿರ್ವಹಣಾ ಘಟಕವೂ ಸೇರಿದಂತೆ ವಿವಿಧ ಘಟಕಗಳ ಕಾರ್ಯನಿರ್ವಹಣೆಗೆ ಟೆಂಡರ್ ಅನುಮೋದಿಸುವ ಚರ್ಚೆ

» ಚಳ್ಳಕೆರೆ

ಸಾಮಾಜಿಕ ಜಾಲತಾಣಗಳಲ್ಲಿ ನಗರಸಭೆಯ ವಿರುದ್ದ ನಾಮಿನಿ ಸದಸ್ಯರು ಪೋಸ್ಟ್ ಮಾಡಿದ ಬಗ್ಗೆ ಸದಸ್ಯ ಹಾಗೂ ನಾಮಿನಿ ಸದಸ್ಯರ ಮಧ್ಯೆ ಬುಧವಾರ ನಡೆದ ನಗರಸಭೆಯ ಕೌನ್ಸಿಲ್ ವಿಶೇಷ ತುರ್ತು ಸಭೆ ಮಾತಿನ ವಾಗ್ವಾದ ನಡೆಯಿತು.



ಪ್ರಾರಂಭದಲ್ಲಿ ವೈಜ್ಞಾನಿಕ ತ್ಯಜ್ಯ ನಿರ್ವಹಣಾಘಟಕ, ಒಣತ್ಯಾಜ್ಯ ಸಂಗ್ರಹಣ ಘಟಕ ಹಾಗೂ ಘನತ್ಯಾಜ್ಯದ ಘಟಕಗಳ ನಿರ್ವಹಣೆಗಾಗಿ ಅತ್ಯವಿರುವ ನೌಕರರನ್ನು ಗುತ್ತಿಗೆ ಆಧಾರದಮೇಲೆ ನೇಮಕ ಮಾಡುವ ಕುರಿತು ಟೆಂಡರ್ ಸಲ್ಲಿಕೆಯಾಗಿದೆ. ಧರ ಅನುಮೋದಿಸಬೇಕು ಹಾಗೂ ಪ್ರಸ್ತುತ ನಗರಸಭೆಯಲ್ಲಿ ಘನತ್ಯಾಜ್ಯ ವಸ್ತು ನಿರ್ವಹಣೆಗಳಿಗೆ ಜಿಪಿಎಸ್ ಅಳವಡಿಸುವ ಕುರಿತು ಸದಸ್ಯರು ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸುವಂತೆ ಮನವಿ ಮಾಡಿದರು.

ನಗರಸಭಾ ಸದಸ್ಯ ಎಸ್.ಜಯಣ್ಣ, ಶಿವಕುಮಾರ್, ಸಿ.ಶ್ರೀನಿವಾಸ್, ಸಿ.ಎಂ.ವಿಶುಕುಮಾರ್, ಕವಿತಾನಾಯಕಿ, ಪಾಲಮ್ಮ, ಸಾಕಮ್ಮ ಮುಂತಾದವರು ಕಳೆದ ಸಭೆಯಲ್ಲೇ ಪ್ರಸ್ತುತ ನಗರಸಭೆಯಲ್ಲಿ ಘನತ್ಯಾಜ್ಯ ವಸ್ತು ವಿಲೇವಾರಿ ಕುರಿತಂತೆ ಕಾರ್ಯನಿರ್ವಹಿಸುವ ವಾಹನಗಳ ವಿವರಗಳನ್ನು ಕೇಳಲಾಗಿತ್ತು. ಆದರೆ, ಇದುವರೆಗೂ ಆ ವಿವರ ನೀಡಿಲ್ಲ. ನಗರಸಭೆ ಆವರಣದಲ್ಲಿ ದುರಸ್ಥಿಗಾಗಿರುವ ವಾಹನ ಸಂಖ್ಯೆ ಎಷ್ಟು, ಚಾಲನೆಯಲ್ಲಿರುವ ವಾಹನಗಳ ಸಂಖ್ಯೆ ಎಷ್ಟು ಸಾರ್ವಜನಿಕರ ಸದುಪಯೋಗಕ್ಕಾಗಿ ಎಷ್ಟು ವಾಹನಗಳನ್ನು ಖರೀದಿಸಿದ್ದಾರೆ ಎಂಬ ಬಗ್ಗೆ ಮಾಹಿತಿ ನೀಡಬೇಕೆಂದು ಕೇಳಿದ್ದರೂ ಇದುವರೆಗೂ ಸಂಬಂಧಪಟ್ಟ ಅಧಿಕಾರಿಗಳು ಮಾಹಿತಿ ನೀಡಿಲ್ಲ. ನಗರಸಭೆಯ 31 ವಾರ್ಡ್‌ಗಳಲ್ಲೂ ಸ್ವಚ್ಚತೆ ಮಾಯವಾಗಿದೆ. ಎಲ್ಲಿಯೂ ಡಿಡಿಟಿ ಫೌಂಡರ್ ಸಿಂಪಡಿಸಿಲ್ಲ, ಸಭೆಯಲ್ಲಿ ಮಾತ್ರ ಸಂಬಂಧಪಟ್ಟ ಅಧಿಕಾರಿಗಳು ಭರವಸೆ ನೀಡುತ್ತಾರೆ, ಅದನ್ನು ಕಾರ್ಯಗತ ಮಾಡುವುದಿಲ್ಲವೆಂದು ಆಕ್ಷೇಪ ವ್ಯಕ್ತಪಡಿಸಿದರು.

> ಪೌರಾಯುಕ್ತರು ಸೇರಿದಂತೆ ಯಾವ ಅಧಿಕಾರಿಯೂ ಸಿಬ್ಬಂದಿಯೂ ಈ ಬಗ್ಗೆ ಗಮನ ನೀಡುತ್ತಿಲ್ಲ. ಸಾರ್ವಜನಿಕರ ಅಭಿಪ್ರಾಯನ್ನು ನಾನು ಸಾಮಾಜಿಕ ಜಾಲತಾಣದಲ್ಲಿ ಹರಿಬಿಟ್ಟಿದ್ದೇನೆ. ಆಡಳಿತ ವ್ಯವಸ್ಥೆ ಉತ್ತಮಗೊಂಡು ಸಾರ್ವಜನಿಕರಿಗೆ ಉತ್ತಮ ಸೇವೆ ಸಿಗಲಿ ಎಂಬ ಉದ್ದೇಶ ನನ್ನದು.
>
> » **ನೇತಾಜಿ ಪ್ರಸನ್ನ ನಾಮಿನಿ ಸದಸ್ಯ**

ನಗರಸಭೆಯ ನಾಮಿನಿ ಸದಸ್ಯ ನೇತಾಜಿಪ್ರಸನ್ನ ಪೌರಾಯುಕ್ತರು ಸೂಕ್ತವಾಗಿ ಕಾರ್ಯನಿರ್ವಹಿಸುತ್ತಿಲ್ಲ, ಸಿಬ್ಬಂದಿ ವರ್ಗವೂ ನಿರ್ಲಕ್ಷ್ಯತನದಿಂದ ಕೆಲಸ ಮಾಡುತ್ತಿದೆ. ಇ–ಸ್ವತ್ತು ಸೇರಿದಂತೆ ಸಾರ್ವಜನಿಕರಿಗೆ ಯಾವುದೇ ದಾಖಲಾತಿಗಳು ಸಕಾಲದಲ್ಲಿ ಲಭ್ಯವಾಗುತ್ತಿಲ್ಲ, ಒಟ್ಟಾರೆ ನಗರಸಭೆ ಆಡಳಿತ ಸಾರ್ವಜನಿಕರ ಆಶಯಗಳಿಗೆ ವಿರೋಧವಾಗಿ ಕಾರ್ಯನಿರ್ವಹಿಸುತ್ತಿದೆ ಎಂಬ ವರದಿಯನ್ನು ಸಾಮಾಜಿಕ ಜಾಲತಾಣದಲ್ಲಿ ಬಿಟ್ಟಿದ್ದು ಸದಸ್ಯರ ಆಕ್ರೋಶಕ್ಕೆ ಕಾರಣವಾಯಿತು.

ಆಡಳಿತ ಮಂಡಳಿ ಸದಸ್ಯರಾದ ಕೆ.ವೀರಭದ್ರಪ್ಪ, ಬಿ.ಟಿ.ರಮೇಶ್‌ಗೌಡ, ರುದ್ರನಾಯಕ, ಹೊಯ್ಸಳಗೋವಿಂದ, ಎಂ.ಜೆ.ರಾಘವೇಂದ್ರ, ವಿರೂಪಾಕ್ಷಿ, ಚಳ್ಳಕೆರೆಯಪ್ಪ, ಶಿಲ್ಪಿಮುರುಳಿ, ಜಯಲಕ್ಷ್ಮಿ, ಸುಜಾತ, ಜೈತುಂಬಿ, ಜೆಡಿಎಸ್, ಬಿಜೆಪಿ ಸದಸ್ಯರು ನೇತಾಜಿಪ್ರಸನ್ನರವರ ಸಾಮಾಜಿಕ ಜಾಲತಾಣಗಳಲ್ಲಿ ನಗರಸಭೆ ಆಡಳಿತದ ಬಗ್ಗೆ ಆಕ್ಷೇಪ ವ್ಯತ್ತಿರುವನ್ನು ಖಂಡಿಸಿದರು. ಸರ್ಕಾರ ನಾಮಿನಿ ಸದಸ್ಯರಾಗಿ ಕಾರ್ಯನಿರ್ವಹಿಸುವವರು ಜವಾಬ್ದಾರಿಯಿಂದ ಕಾರ್ಯ ನಿರ್ವಹಿಸಬೇಕಂದು ತಿಳಿಸಿದರು. ನಗರಸಭೆಯ ಕೌನ್ಸಿಲ್ ವಿಶೇಷ ತುರ್ತು ಸಭೆ ಅಧ್ಯಕ್ಷೆ ಆರ್.ಮಂಜುಳಾಪ್ರಸನ್ನಕುಮಾರ್, ಉಪಾಧ್ಯಕ್ಷೆ ಕವಿತಾಬೋರಯ್ಯ, ನಾಮಿನಿ ಸದಸ್ಯರಾದ ಅನ್ವರ್‌ಮಾಸ್ಟರ್, ನಟರಾಜ್, ಆರ್.ವೀರಭದ್ರಪ್ಪ, ವ್ಯವಸ್ಥಾಪಕ ಲಿಂಗರಾಜು, ಕಂದಾಯಾಧಿಕಾರಿ ಸತೀಶ್, ನೈರ್ಮಲ್ಯ ಇಂಜಿನಿಯರ್ ನರೇಂದ್ರಬಾಬು ಮುಂತಾದವರು ಇದ್ದರು.

# ಬಿತ್ತನೆ ಬೀಜ ಖರೀದಿ ವೇಳೆ ಕಡ್ಡಾಯವಾಗಿ ರಶೀದಿ ಪಡೆಯಿರಿ: ಗಂಗಾಧರಸ್ವಾಮಿ.ಜಿ.ಎಂ

» ದಾವಣಗೆರೆ

ರೈತರಿಗೆ ಸರ್ಕಾರದಿಂದ ಸಿಗುವ ರಿಯಾಯಿತಿ ದರದ ಬಿತ್ತನೆ ಬೀಜ, ರಸಗೊಬ್ಬರ ಹಾಗೂ ಇತರೆ ಯೋಜನೆಗಳ ಲಾಭವನ್ನು ಸಕಾಲದಲ್ಲಿ ರೈತರಿಗೆ ತಲುಪಿಸುವಂತೆ ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ತಿಳಿಸಿದರು.

ಬುಧುವಾರ(ಮೇ.28) ರಂದು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜಿಲ್ಲಾ ಮಟ್ಟದ ಬಿತ್ತನೆ ಬೀಜ, ರಸಗೊಬ್ಬರ ವಿತರಣೆ ಹಾಗೂ ಇಲಾಖೆಯ ಯೋಜನೆಗಳ ಅನುಷ್ಠಾನ ಕುರಿತು ಆಯೋಜಿಸಲಾಗಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಈಗ ಮುಂಗಾರು ಹಂಗಾಮು ಆರಂಭವಾಗುತ್ತಿದ್ದು, ಬೀತ್ತನೆ ಬೀಜ, ರಸಗೊಬ್ಬರ ಪೂರೈಕೆಯಲ್ಲಿ ಯಾವುದೇ ಸಮಸ್ಯೆ ಆಗದಂತೆ ಎಚ್ಚರಿಕೆ ವಹಿಸಬೇಕು. ರೈತರು ಅಧಿಕೃತ ಮಾರಾಟಗಾರರಿಂದ ಬೀಜ ಖರೀದಿಸಬೇಕು. ರಿಯಾಯಿತಿ ದರದ ಬಿತ್ತನೆ ಬೀಜಗಳನ್ನು ಪಡೆದುಕೊಂಡು ಬಿತ್ತನೆ ಮಾಡಬೇಕು. ಬೀಜಗಳನ್ನು ರೈತರು ಖರೀದಿಸಿದ ನಂತರ ಕಡ್ಡಾಯವಾಗಿ ರಶೀದಿಯನ್ನು ಪಡೆದುಕೊಳ್ಳಬೇಕೆಂದು ತಿಳಿಸಿದರು.

ಈಗಾಗಲೇ ತಾಲ್ಲೂಕು ಆಡಳಿತ, ರೈತರ ಬೇಡಿಕೆಗೆ ಅನುಗುಣವಾಗಿ ಗುಣಮಟ್ಟದ ಬಿತ್ತನೆ ಬೀಜ, ರಸಗೊಬ್ಬರ ಹಾಗೂ ಇತರೆ ಪರಿಕರಗಳನ್ನು ಪೂರೈಸಲು ಸನ್ನದ್ಧವಾಗಿದೆ. ಹಾಗೂ ಈಗಾಗಲೇ ತಾಲ್ಲೂಕಿನ ಎಲ್ಲಾ



ಕೃಷಿ ಪರಿಕರ ಮಾರಾಟಗಾರರಿಗೂ ಈ ಕುರಿತು ತರಬೇತಿಯನ್ನು ಸಹ ನೀಡಲಾಗಿದೆ ಎಂದರು.


ಕಳಪೆ ಗುಣಮಟ್ಟದ ಪರಿಕರಗಳನ್ನು ಮಾರಾಟ ಮಾಡಿದರೆ ಕಾನೂನು ರೀತಿಯಲ್ಲಿ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆಯನ್ನೂ ನೀಡಲಾಗಿದೆ. ರೈತರು ಸಹ ಈ ನಿಟ್ಟಿನಲ್ಲಿ ಯಾವುದೇ ಕೃಷಿ ಪರಿಕರಗಳನ್ನು ಮುಖ್ಯವಾಗಿ ಬಿತ್ತನೆ ಬೀಜಗಳನ್ನು ಅನಧಿಕೃತ ಅಥವಾ ಪರವಾನಿಗೆ ಇಲ್ಲದ ಮಾರಾಟಗಾರರಿಂದ ಪಡೆಯಬಾರದು ಎಂದು ತಿಳಿಸಿದರು. ತಾಲ್ಲೂಕಿನ ಯಾವುದೇ ಭಾಗದಲ್ಲಿ ಅಂತಹ ಕಾನೂನು ಬಾಹಿರ ಕೃಷಿ ಪರಿಕರಗಳ ಸಂಗ್ರಹ, ಬಿತ್ತನೆ ಬೀಜ ಮಾರಾಟ ಕಂಡು ಬಂದಲ್ಲಿ ಮಾಹಿತಿ ನೀಡಬೇಕು. ನಕಲಿ ಸಂಸ್ಥೆಗಳು, ಅನಧಿಕೃತ ವ್ಯಕ್ತಿಗಳ ಮೇಲೆ ನಿಗಾ ವಹಿಸಬೇಕು. ಹೊರ ಜಿಲ್ಲೆಗಳಿಗೆ ಬಿತ್ತನೆ ಬೀಜ, ರಸಗೊಬ್ಬರಗಳನ್ನು ಮಾರಾಟವಾಗದಂತೆ ನೋಡಿಕೊಳ್ಳಬೇಕು ಎಂದರು.

ರೈತರು ಕೇವಲ ಒಂದು ಅಥವಾ ಎರಡು ಪೋಷಕಾಂಶ ಒದಗಿಸುವ ಯೂರಿಯಾ ಹಾಗೂ ಡಿ.ಎ.ಪಿ.ಯನ್ನು ರೂಢಿಗತವಾಗಿ ಬಳಸುತ್ತಿದ್ದು, ಇವುಗಳಲ್ಲಿ ಸಾರಜನಕ ಮತ್ತು ರಂಜಕದ ಅಂಶ ಮಾತ್ರವಿರುತ್ತದೆ. ಆದರೆ, ಬೆಳೆಗಳಿಗೆ ಬರ ಮತ್ತು ರೋಗ ನಿರೋಧಕ ಶಕ್ತಿ ನೀಡಿ ಕಾಳಿನ ತೂಕ ಹೆಚ್ಚಿಸಲು ಅತ್ಯಂತ ಅವಶ್ಯಕವಾಗಿರುವ ಪೊಟ್ಯಾಷ್ ಲಭ್ಯವಿರುವುದಿಲ್ಲ. ಮಾರುಕಟ್ಟೆಯಲ್ಲಿ ವಿವಿಧ ಶ್ರೇಣಿಯ (ಗ್ರೇಡ್) ಸಾರಜನಕ, ರಂಜಕ ಮತ್ತು ಪೊಟ್ಯಾಷ್‌ಯುಕ್ತ ಬಹಳಷ್ಟು ರಸಗೊಬ್ಬರಗಳು ಲಭ್ಯವಿದ್ದು, ಶಿಫಾರಸ್ಸಿನಂತೆ ವಿವಿಧ ರಸಗೊಬ್ಬರಗಳ ಸಂಯೋಜನೆಯೊಂದಿಗೆ ಬಳಸಬೇಕು. ಆದರೆ ಬೆಳೆಗಳಿಗೆ ಸಾರಜನಕ, ರಂಜಕ, ಪೊಟ್ಯಾಷ್ ರಸಗೊಬ್ಬರಗಳನ್ನು 4 : 2 : 1ರ ಅನುಪಾತದಲ್ಲಿ ಬಳಸಬೇಕು. ಇತ್ತೀಚಿನ ವರ್ಷಗಳಲ್ಲಿ ರೈತರು ಬಳಸುತ್ತಿರುವ ರಸಗೊಬ್ಬರಗಳ ಅನುಪಾತವು ರಾಜ್ಯದಲ್ಲಿ 5:3:1 ಆಗಿರುತ್ತದೆ. ಇದನ್ನು ಸಮತೋಲನಾತ್ಮಕ ಗೊಬ್ಬರಗಳ ಬಳಕೆಯನ್ನು ಉತ್ತೇಜಿಸಲು ಪೊಟ್ಯಾಷ್ ಯುಕ್ತ ಸಂಯುಕ್ತ ರಸಗೊಬ್ಬರಗಳ ಬಳಕೆಯನ್ನು ಪ್ರೇರೇಪಿಸುವುದು ಮುಖ್ಯ ಎಂದರು. ಅಲ್ಲದೆ, ರೈತರು ರಸಗೊಬ್ಬರವನ್ನು ಕೇವಲ ಒಂದೇ ಸಂಸ್ಥೆಯ ಅಥವಾ ಒಂದೇ ರಸಗೊಬ್ಬರಕ್ಕೆ ಆದ್ಯತೆ ನೀಡದೆ, ಡಿ.ಎ.ಪಿ ರಸಗೊಬ್ಬರಕ್ಕೆ ಪರ್ಯಾಯವಾಗಿ ಗಂಧಕ ಒದಗಿಸುವ ಹಾಗೂ ಪೊಟ್ಯಾಷ್ ಒದಗಿಸುವ ಇತರೆ ಸಂಯುಕ್ತ ರಸಗೊಬ್ಬರಳನ್ನು ಬಳಸಬೇಕು. ವಿವಿಧ ಹಂತಗಳಲ್ಲಿ ಜರುಗುವ ತರಬೇತಿಗಳು, ಕಾರ್ಯಾಗಾರಗಳು ಹಾಗೂ ಅಭಿಯಾನಗಳಲ್ಲಿ ಕಡ್ಡಾಯವಾಗಿ ರೈತರಿಗೆ ಹಾಗೂ ರಸಗೊಬ್ಬರ ಮಾರಾಟಗಾರರಿಗೆ ಅರಿವು ಮೂಡಿಸಬೇಕು. ಮಾರಾಟಗಾರರು ರಸಗೊಬ್ಬರಗಳನ್ನು ಮಾರಾಟ ಮಾಡುವಾಗ ಪೊಟ್ಯಾಷ್ ಯುಕ್ತ ಸಂಯುಕ್ತ ರಸಗೊಬ್ಬರಗಳ ಉಪಯುಕ್ತತೆ ಬಗ್ಗೆ ರೈತರಿಗೆ ತಿಳಿಸಬೇಕು. ಯೂರಿಯಾ ಗೊಬ್ಬರವನ್ನು ಇಂಡಸ್ಟ್ರಿಯಲ್‌ಗಳಿಗೆ ಮಾರಾಟ ಮಾಡಬಾರದು ಎಂದರು.

ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಶ್ರೀನಿವಾಸ್ ಚಿಂತಾಲ್, ಉಪಕೃಷಿ ನಿರ್ದೇಶಕ ಅಶೋಕ, ಲೀಡ್ ಫರ್ಟಿಲೈಸರ್ಸ್ ಸಂಸ್ಥೆಯ ಅಧಿಕಾರಿ ಉಮೇಶ್, ರಸಗೊಬ್ಬರ ಪೂರೈಸುವ ಸಂಸ್ಥೆಯ ಮಾಲೀಕರು, ಬೀತ್ತನೆ ಬೀಜ ಸರಬರಾಜು ಮಾಡುವ ಮಾಲೀಕರು ಹಾಜರಿದ್ದರು.

## ಫಾಸ್ಟ್ ನ್ಯೂಸ್

### ಬಾಗಿಮರದಮ್ಮ ದೇವಸ್ಥಾನ ಜೀರ್ಣೋದ್ಧಾರಕ್ಕಾಗಿ 2 ಲಕ್ಷ ರೂ. ನೆರವು



» ಹೊಸದುರ್ಗ

ತಾಲೂಕಿನ ಹಾಲರಾಮೇಶ್ವರ ಯೋಜನಾ ಕಚೇರಿ ವ್ಯಾಪ್ತಿಯ ಬಾಗೂರು ವಲಯದ ನೀರಗುಂದ ಗ್ರಾಮದ ಶ್ರೀ ಬಾಗಿ ಮರದಮ್ಮ ದೇವಿ ದೇವಸ್ಥಾನದ ಜೀರ್ಣೋದ್ಧಾರಕ್ಕಾಗಿ ಶ್ರೀ ಕ್ಷೇತ್ರದಿಂದ ಪೂಜ್ಯರು ಮಂಜೂರು ಮಾಡಿದ ಎರಡು ಲಕ್ಷ ರೂಪಾಯಿ ಡಿಡಿ ಯನ್ನು ತಾಲೂಕಿನ ಯೋಜನಾಧಿಕಾರಿ ಚಂದ್ರಶೇಖರ್ ವಿತರಣೆ ಮಾಡಿದರು ಈ ಸಂದರ್ಭದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಗ್ರಾಮೀಣ ಪ್ರದೇಶದಲ್ಲಿ ಅನೇಕ ದೇವಸ್ಥಾನಗಳ ಜೀರ್ಣೋದ್ಧಾರಕ್ಕೆ ಸಹಾಯಸ್ತವನ್ನು ಪರಮಪೂಜ್ಯ ಡಾಕ್ಟರ್ ಡಿ ವೀರೇಂದ್ರ ಹೆಗ್ಡೆ ಅವರು ಮಾಡುತ್ತಿದ್ದಾರೆ ಇದನ್ನು ಕರ್ನಾಟಕ ರಾಜ್ಯದ ಪ್ರತಿಯೊಂದು ಹಳ್ಳಿಯ ಜನರು ಉತ್ತಮ ರೀತಿಯಲ್ಲಿ ಸದುಪಯೋಗ ಪಡಿಸಿಕೊಂಡು ದೇವಸ್ಥಾನದ ಜೀರ್ಣೋದ್ಧಾರ ಮಾಡಿಕೊಂಡು ಬಂದಿರುತ್ತಾರೆ, ಅದೇ ರೀತಿಯಲ್ಲಿ ನೀವು ಕೂಡ ದೇವಸ್ಥಾನದ ಜೀವನವನ್ನು ಬೇಗ ಮುಗಿಸಿ ಎನ್ನುವ ಮಾತನ್ನು ತಿಳಿಸುತ್ತಾ ದೇವಸ್ಥಾನ ಕಮಿಟಿ ಅವರಿಗೆ ಆಆ ಹಸ್ತಾಂತರ ಮಾಡಿದರು. ಈ ಸಂದರ್ಭದಲ್ಲಿ ಜಿಲ್ಲಾ ಜನ ಜಾಗೃತಿ ವೇದಿಕೆ ಅಧ್ಯಕ್ಷ ಓಂಕಾರಪ್ಪ ಮತ್ತು ಅಜ್ಜಪ್ಪ ಜೈನ್ ಮಿಲನ್ ಉಪಾಧ್ಯಕ್ಷರು ದಕ್ಷಿಣ ವಲಯ ಬೆಂಗಳೂರು ಇವರು ಇದ್ದರು. ಬಾಗಿ ಮರದಮ್ಮ ದೇವಸ್ಥಾನ ಸಮಿತಿ ಅಧ್ಯಕ್ಷರಾದ ಪರಮೇಶ್ವರಪ್ಪ ಹಾಗೂ ನಿವೃತ್ತ ಶಿಕ್ಷಕರಾದ ತಿಪ್ಪೇಶಪ್ಪ ಮತ್ತು ತ್ಯಾಗರಾಜ್ ಊರಿನ ಗ್ರಾಮಸ್ಥರು ಸ್ವಸಹಾಯ ಸಂಘದ ಸದಸ್ಯರ ಉಪಸ್ಥಿತಿಯಲ್ಲಿ ವಿತರಣೆ ಮಾಡಲಾಯಿತು.

### ಮೇ29ರಂದು ನೇರ ಫೋನ್ ಇನ್

» ಚಿತ್ರದುರ್ಗ

ಜಿಲ್ಲಾಸ್ಪತ್ರೆಯಲ್ಲಿರುವ ರಕ್ತ ಕೇಂದ್ರ ಮತ್ತು ವೈದ್ಯಕೀಯ ಪ್ರಯೋಗಾಲಯದಲ್ಲಿರುವ ಸೇವಾ ಸೌಲಭ್ಯಗಳ ಕುರಿತು ಹಲೋ ಡಾಕ್ಟರ್ ಆರೋಗ್ಯದ ಅರಿವು ಇದೇ ಮೇ29ರಂದು ಬೆಳಿಗ್ಗೆ 10 ರಿಂದ 11ರವರೆಗೆ ನೇರ ಫೋನ್ ಇನ್ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಆಕಾಶವಾಣಿಯ ಫೋನ್ ಇನ್ ಕಾರ್ಯಕ್ರಮದಲ್ಲಿ ಜಿಲ್ಲಾಸ್ಪತ್ರೆಯ ರಕ್ತ ಕೇಂದ್ರದ ವೈದ್ಯಾಧಿಕಾರಿ ಡಾ.ರೂಪಾ ಮತ್ತು ಫೆಥಾಲಾಜಿಸ್ಟ್ ಡಾ.ಕೃಷ್ಣ ಕಿಶೋರ್ ಭಾಗವಹಿಸಲಿದ್ದು, ಆಕಾಶವಾಣಿಯ ಎಂ.ಎಸ್.ದ್ಯಾಮಲಾಂಬಿಕಾ ಅವರು ಸಂವಾದ ನಡೆಸುವರು. ನೇರ ಫೋನ್ ಇನ್ ಕಾರ್ಯಕ್ರಮದಲ್ಲಿ ಭಾಗವಹಿಸಲು 9448640273 ಹಾಗೂ 9141970272 ಗೆ ಕರೆ ಮಾಡಬಹುದಾಗಿದೆ.

**ಸಂದರ್ಶನ ಪ್ರಸಾರ:** ರಸಗೊಬ್ಬರ ಕೃತಕ ಅಭಾವ ಕಡಿವಾಣ ಹಾಕುವ ಕುರಿತು ಜಿಲ್ಲೆಯ ರೈತ ಸಂಘಟನೆಗಳಿಂದ ಜಿಲ್ಲಾಧಿಕಾರಿಗಳಿಗೆ ಮನವಿಗಳು ಸಲ್ಲಿಕೆಯಾದ ಹಿನ್ನಲೆಯಲ್ಲಿ ಜಿಲ್ಲಾಧಿಕಾರಿಗಳ ಆದೇಶದ ಮೇರೆಗೆ ಜಂಟಿ ಕೃಷಿ ನಿರ್ದೇಶಕ ಬಿ.ಮಂಜುನಾಥ ಅವರೊಂದಿಗೆ ಮುಂಗಾರು ಹಂಗಾಮಿನ ಸಿದ್ದತೆ, ರಸಗೊಬ್ಬರಗಳ ಕೃತಕ ಅಭಾವಕ್ಕೆ ಕಡಿವಾಣ ಹಾಗೂ ಮುದ್ರಿತ ಬೆಲೆಗಿಂತ ಹೆಚ್ಚು ಬೆಲೆಗೆ ಮಾರಾಟ ಮಾಡಿದವರಿಗೆ ಸೂಕ್ತ ಕ್ರಮಗಳ ಹಿನ್ನಲೆಯಲ್ಲಿ ಕೃಷಿ ಇಲಾಖೆಯ ಜಂಟಿ ಕೃಷಿ ನಿರ್ದೇಶಕ ಬಿ.ಮಂಜುನಾಥ ಅವರೊಂದಿಗೆ ಸಂದರ್ಶಕ ನವೀನ್ ಮಸ್ಕಲ್ ಮಾಡಿದ ಸಂದರ್ಶನ ಮೇ29ರಂದು ಬೆಳಿಗ್ಗೆ 8.35ಕ್ಕೆ ಚಿತ್ರದುರ್ಗ ಆಕಾಶವಾಣಿ ಕೇಂದ್ರದಿಂದ ಪ್ರಸಾರವಾಗಲಿದೆ ಎಂದು ಪ್ರಕಟಣೆ ತಿಳಿಸಿದೆ.

### ಪ್ರವೇಶ ಪತ್ರ ಪಡೆಯಲು ಸೂಚನೆ

» ಚಿತ್ರದುರ್ಗ

2025–26ನೇ ಶೈಕ್ಷಣಿಕ ಸಾಲಿಗೆ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಕಾಲೇಜು ಹಾಗೂ ಮೌಲಾನಾ ಆಜಾದ್ ಮಾದರಿ ಶಾಲೆಗಳಲ್ಲಿ ಖಾಲಿ ಇರುವ ಅತಿಥಿ ಶಿಕ್ಷಕರು, ಉಪನ್ಯಾಸಕರನ್ನು ತಾತ್ಕಾಲಿಕವಾಗಿ ಆಯ್ಕೆ ಮಾಡಲು ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ಭಾನುವಾರ ಜೂನ್ 01ರಂದು ನಿಗಧಿಗೊಳಿಸಲಾಗಿದೆ. ಅಭ್ಯರ್ಥಿಗಳು ಪ್ರವೇಶ ಪತ್ರವನ್ನು ಜಿಲ್ಲಾ ಕಚೇರಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಸ್ಟೇಡಿಯಂ ರಸ್ತೆ, ಆಂಜನೇಯ ದೇವಸ್ಥಾನ ಎದುರು, ಶ್ರೀರಾಮ ಕಾಂಪ್ಲೆಕ್ಸ್, ಮೊದಲನೇಮಹಡಿ, ಚಿತ್ರದುರ್ಗ ಇಲ್ಲಿ ಮೇ31ರಂದು ಮಧ್ಯಾಹ್ನ 3 ಗಂಟೆ ಒಳಗಾಗಿ ಪಡೆಯಬೇಕು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಜಿ.ರೇಖಾ ತಿಳಿಸಿದ್ದಾರೆ.

### ಮೂಲಸೌಲಭ್ಯ ನಿಗಮದ ವತಿಯಿಂದ ಅನುದಾನ

» ಬೆಂಗಳೂರು

ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಮೂಲಸೌಲಭ್ಯ ಅಭಿವೃದ್ಧಿ ನಿಗಮದ ವತಿಯಿಂದ ಇಂದು 17,21,56, 839 ರೂ.ಗಳ ಸಾಮಾನ್ಯ ಡಿವಿಡೆಂಡ್, 68,69,00,000 ರೂ.ಗಳ ವಿಶೇಷ ಡಿವಿಡೆಂಡ್ ಹಾಗೂ ಸಿಎಂ ಪರಿಹಾರ ನಿಧಿಗೆ 3,00,00,000 ರೂ.ಗಳ ಮೊತ್ತದ ಚೆಕ್ ನ್ನು ಕೈಗಾರಿಕಾ ಸಚಿವ ಎಂ. ಬಿ.ಪಾಟೀಲ್ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಹಸ್ತಾಂತರ ಮಾಡಿದರು.

## ಮೇ.31ರಂದು 8 ಕೇಂದ್ರಗಳಲ್ಲಿ 3952 ವಿದ್ಯಾರ್ಥಿಗಳಿಗೆ ವಿವಿಧ ವೃತ್ತಿಪರ ಕೋರ್ಸ್, ತರಬೇತಿ ಪ್ರವೇಶ ಪರೀಕ್ಷೆ

# ಜಾಗೃತೆಯಿಂದ ಕಾರ್ಯನಿರ್ವಹಿಸಿ: ಡಿಸಿ

» ದಾವಣಗೆರೆ

ಜಿಲ್ಲೆಯ 8 ಕೇಂದ್ರಗಳಲ್ಲಿ ಮೇ.31 ರಂದು ವಿವಿಧ ವೃತ್ತಿಪರ ಕೋರ್ಸ್‌ಗಳ ಲ್ಯಾಟರಲ್ ಎಂಟ್ರಿ, ಎಂ.ಇ, ಎಂಟೆಕ್, ನಾಗರಿಕ ಸೇವಾ ಪರೀಕ್ಷೆ ತರಬೇತಿ ಪ್ರವೇಶಕ್ಕೆ ಪ್ರವೇಶ ಪರೀಕ್ಷೆ ನಡೆಯಲಿದ್ದು ಯಾವುದೇ ಆಕ್ಷೇಪಣೆಗಳಿಗೆ ಅವಕಾಶ ನೀಡದಂತೆ ಅಧಿಕಾರಿಗಳು ಪರೀಕ್ಷಾ ಕಾರ್ಯವನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ಸೂಚಿಸಿದರು.



ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ನಡೆಸಲಾಗುವ ವಿವಿಧ ರೀತಿಯ ಪ್ರವೇಶ ಪರೀಕ್ಷೆ ಕುರಿತು ಬುಧವಾರ ನಡೆದ ಪೂರ್ವ ಸಿದ್ದತಾ ಸಭೆಯಲ್ಲಿ ಅವರು ಮಾತನಾಡಿದರು. ಜಿಲ್ಲೆಯಲ್ಲಿ ಈಗಾಗಲೇ ಹಲವು ಪರೀಕ್ಷೆಗಳನ್ನು ಯಾವುದೇ ಆಕ್ಷೇಪಣೆಗಳಿಗೆ ಅವಕಾಶ ನೀಡದೆ ಸುಗಮವಾಗಿ ಪರೀಕ್ಷೆ ನಡೆಸಲಾಗಿದೆ. ಅದರಂತೆ ಮೇ 31 ರಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ನಡೆಸಲಾಗುವ ವಿವಿಧ ರೀತಿಯ ಪ್ರವೇಶ ಪರೀಕ್ಷೆಗಳನ್ನು ಸಹ ಅಧಿಕಾರಿಗಳು ಸಮನ್ವಯತೆಯಿಂದ ಹಾಗೂ ಜವಾಬ್ದಾರಿಯತವಾಗಿ ಕೆಲಸ ಮಾಡಬೇಕು. ಪರೀಕ್ಷೆ ನಡೆಯುವ ಸಂದರ್ಭದಲ್ಲಿ ಯಾವುದೇ ರೀತಿಯ ತೊಡಕುಗಳುಂಟಾದಲ್ಲಿ, ಇನ್ನಿತರೆ ಲೋಪದೋಷಗಳು ಕಂಡುಬಂದಲ್ಲಿ ಮೇಲಾಧಿಕಾರಿಗಳಿಗೆ ಸಂಪರ್ಕಿಸಿ ಪರಿಹಾರ ಕಂಡುಕೊಳ್ಳಬೇಕು. ನೋಡಲ್ ಅಧಿಕಾರಿಗಳು ಪರೀಕ್ಷಾ ಮಾರ್ಗಸೂಚಿಗಳನ್ನು ಎಚ್ಚರಿಕೆಯಿಂದ ಕಟ್ಟುನಿಟ್ಟಾಗಿ ಪಾಲಿಸಬೇಕು. ಎಲ್ಲಾ ಪರೀಕ್ಷಾ ಕೇಂದ್ರಗಳಿಗೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸುವುದರ ಜೊತೆಗೆ ಪರೀಕ್ಷಾ ಕೇಂದ್ರಕ್ಕೆ ಪೊಲೀಸ್ ಸಿಬ್ಬಂದಿ ಮತ್ತು ಆರೋಗ್ಯ ಇಲಾಖೆ ಸಿಬ್ಬಂದಿ ನಿಯೋಜಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಕರಿಸಿದ್ದಪ್ಪ ಮಾತನಾಡಿ, ಜಿಲ್ಲೆಯಲ್ಲಿ ಮೇ.31ರ ಮಧ್ಯಾಹ್ನ 2 ರಿಂದ 5 ಗಂಟೆಯವರೆಗೆ ಪ್ರತ್ಯೇಕ ಒಟ್ಟು 8 ಪರೀಕ್ಷಾ ಕೇಂದ್ರಗಳಲ್ಲಿ ಒಟ್ಟು 3952 ವಿದ್ಯಾರ್ಥಿಗಳು 3 ಹಂತಗಳಲ್ಲಿ ಪರೀಕ್ಷೆ ಎದುರಿಸಲಿದ್ದಾರೆ.

ಮಧ್ಯಾಹ್ನ 2 ರಿಂದ ಸಂಜೆ 5 ರವರೆಗೆ ಪ್ರಸಕ್ತ ಸಾಲಿನ ಇಂಜಿನಿಯರಿಂಗ್ ಕೋರ್ಸುಗಳಿಗೆ ಡಿಪ್ಲೊಮಾದಿಂದ ಲ್ಯಾಟರಲ್ ಎಂಟ್ರಿ ಪರೀಕ್ಷೆ ಮತ್ತು ಎಂ.ಇ ಅಥವಾ ಎಂ.ಟೆಕ್ ಕೋರ್ಸುಗಳ ಪ್ರವೇಶಕ್ಕಾಗಿ ಪರೀಕ್ಷೆ ನಡೆಸಲಾಗುವುದು. ಅದೇ ದಿನ ಮಧ್ಯಾಹ್ನ 2.30 ರಿಂದ ಸಂಜೆ 4.30ರವರೆಗೆ ಐಎಎಸ್, ಕೆಎಎಸ್ ಪೂರ್ವಭಾವಿ ತರಬೇತಿಗೆ ಪರೀಕ್ಷೆ ನಡೆಯಲಿದೆ ಎಂದು ಮಾಹಿತಿ ನೀಡಿದರು. ಈ ವೇಳೆ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಜಿ.ಮಂಜುನಾಥ್, ಜಿಲ್ಲೆಯ ಎಲ್ಲಾ ಪರೀಕ್ಷಾ ಕೇಂದ್ರದ ಪ್ರಾಂಶುಪಾಲರು, ನೋಡಲ್ ಅಧಿಕಾರಿಗಳು ಸೇರಿದಂತೆ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಇದ್ದರು.

## ಶಾಲೆ ಪ್ರಾರಂಭದ ದಿನದಿಂದಲೇ ಮಕ್ಕಳ ದಾಖಲಾತಿ ಪ್ರಕ್ರಿಯೆ ಆರಂಭಿಸಿ



» ಹೊಸದುರ್ಗ

ಶಾಲೆ ಪ್ರಾರಂಭದ ದಿನದಿಂದಲೇ ಮಕ್ಕಳ ದಾಖಲಾತಿ ಪ್ರಕ್ರಿಯೆ ಆರಂಭಿಸಿ ಜೂನ್ 30ರೊಳಗೆ ಪೂರ್ಣಗೊಳಿಸಬೇಕು ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಸೈಯದ್ ಮೋಸೀನ್ ತಿಳಿಸಿದರು. ಪಟ್ಟಣದಲ್ಲಿ 2025–26ನೇ ಸಾಲಿನ ಶಾಲಾ ಪ್ರಾರಂಭೋತ್ಸವದ ಕುರಿತಾಗಿ ಹೊಸದುರ್ಗ ತಾಲ್ಲೂಕಿನ ರಾಜ್ಯ ಪಠ್ಯಕ್ರಮ ಅನುಸರಿಸುತ್ತಿರುವ ಎಲ್ಲಾ ಸರ್ಕಾರಿ, ಅನುದಾನಿತ ಪ್ರಾಥಮಿಕ ಶಾಲೆಗಳ ಮುಖ್ಯ ಶಿಕ್ಷಕರ ಸಭೆಯಲ್ಲಿ ಅವರು ಮಾತನಾಡಿದರು.

ಪ್ರಾರಂಭೋತ್ಸವ ಕಾರ್ಯಕ್ರಮದಲ್ಲಿ ಶಾಲೆಯ ಎಲ್ಲ ಶಿಕ್ಷಕರೂ ಕಡ್ಡಾಯವಾಗಿ ಪಾಲ್ಗೊಂಡು ನಿರ್ದಿಷ್ಟ ವಯೋಮಿತಿ ಇರುವ ಎಲ್ಲ ಮಕ್ಕಳೂ ಶಾಲೆಗೆ ಸೇರುವಂತೆ ನೋಡಿಕೊಳ್ಳಬೇಕು. ಶಾಲೆಗಳಲ್ಲಿನ ಮಧ್ಯಾಹ್ನದ ಬಿಸಿಯೂಟ, ಕ್ಷೀರಭಾಗ್ಯ, ಪಠ್ಯಪುಸ್ತಕ, ಸಮವಸ್ತ್ರಗಳ ವಿತರಣೆ ಮುಂತಾದ ಕಾರ್ಯಕ್ರಮಗಳು ಸುಗಮವಾಗಿ ನಡೆಯುವಂತೆ ನೋಡಿಕೊಳ್ಳಬೇಕು. ಶಿಕ್ಷಕರು ಮಕ್ಕಳ ದಾಖಲಾತಿ ಪ್ರಮಾಣ ಹೆಚ್ಚಲು ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು. ಎಸ್.ಎಸ್.ಎಲ್.ಸಿ ಫಲಿತಾಂಶವು ಸಹ ಪ್ರಾಥಮಿಕ ಶಿಕ್ಷಣವನ್ನು ಅವಲಂಭಿಸಿದ್ದು, ಪ್ರಾಥಮಿಕ ಶಾಲಾ ಶಿಕ್ಷಕರ ಜವಾಬ್ದಾರಿಯನ್ನು ತಿಳಿಸಿದರು. ಕ್ಷೇತ್ರ ಸಮನ್ವಯಾಧಿಕಾರಿ ಶ್ರೀನಿವಾಸ್, ಅಕ್ಷರ ದಾಸೋಹದ ಸಹಾಯಕ ನಿರ್ದೇಶಕ ಶಾಂತಪ್ಪ ಮಾತನಾಡಿದರು. ಕಾರ್ಯಕ್ರಮದಲ್ಲಿ ಶಿಕ್ಷಣ ಸಂಯೋಜಕ ಶಶಿಧರ್, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ನಾಗಪ್ಪ , ಬಡ್ತಿ ಮು ಶಿ ಸಂಘದ ಅಧ್ಯಕ್ಷ ತಿಪ್ಪೇಶಪ್ಪ, ಸರ್ಕಾರಿ ನೌಕರರ ಸಂಘದ ಪದಾಧಿಕಾರಿ ಅನಂತ್, ಮತ್ತು ಎಲ್ಲಾ ಸಿಆರ್‌ಪಿಗಳು ಹಾಜರಿದ್ದರು.

## ತಳಕು ಕ್ಲಸ್ಟರ್ ವಿಭಾಗದ ವಿದ್ಯಾರ್ಥಿಗಳಿಗೆ ಉಚಿತ ಪಠ್ಯಪುಸ್ತಕ ವಿತರಣೆ

» ಚಳ್ಳಕೆರೆ

ಕಳೆದ ಏ.10ರಿಂದ ಸರ್ಕಾರಿ ಶಾಲೆಗಳಿಗೆ ರಜೆಘೋಷಿಸಿದ್ದು ಮೇ.29ರ ಗುರುವಾರ ಮತ್ತೆ ಎಂದಿನಂತೆ ಶಾಲೆಗಳು ಪುನರಾಂಭವಾಗಲಿವೆ. ಶಿಕ್ಷಣ ಇಲಾಖೆ ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕವೂ ಸೇರಿದಂತೆ ಇತರೆ ಸೌಲಭ್ಯವನ್ನು ಒದಗಿಸುವ ಕಾರ್ಯದಲ್ಲಿ ನಿರತವಾಗಿದೆ. ತಳಕು ಕ್ಲಸ್ಟರ್ ವಿಭಾಗದ ಸುಮಾರು 12 ಶಾಲೆಗಳ ಒಂದೂವರೆ ಸಾವಿರ ವಿದ್ಯಾರ್ಥಿಗಳಿಗೆ ಸಿಆರ್‌ಪಿ ತಿಪ್ಪೇಸ್ವಾಮಿ ಬುಧವಾರ ಪಠ್ಯಪುಸ್ತಕಗಳನ್ನು ಸಂಬಂಧಪಟ್ಟ ಶಾಲೆಗಳ ಮುಖ್ಯೋಪಾಧ್ಯಯರಿಗೆ ನೀಡಿ ಅವುಗಳನ್ನು ಶಾಲೆಗೆ ಬರುವ ಮಕ್ಕಳಿಗೆ ನೀಡುವಂತೆ ಸೂಚನೆ ನೀಡಿದರು. ಈ ಬಾರಿ ಶಾಲೆ ಆರಂಭಕ್ಕೂ ಮುನ್ನವೇ ಪಠ್ಯಪುಸ್ತಕಗಳು ಸಾಕಷ್ಟು ಪ್ರಮಾಣದಲ್ಲಿ ಲಭ್ಯವಾಗಿವೆ.



## ಪ್ರಮುಖ ಸುದ್ದಿ

### ಪಿ.ಸಿ ಮತ್ತು ಪಿಎನ್‌ಡಿಟಿ ಸಮನ್ವಯ ಸಮಿತಿ ಸಭೆ, ಪ್ರಸವ ಪೂರ್ವ ಭ್ರೂಣಲಿಂಗ ಪತ್ತೆ ತಡೆಗೆ ಕಟ್ಟುನಿಟ್ಟಿನ ಕ್ರಮವಾಗಬೇಕು

# ನವಜಾತ ಶಿಶುಗಳ ಲಿಂಗಾನುಪಾತದಲ್ಲಿ ರಾಜ್ಯಕ್ಕೆ 2ನೇಸ್ಥಾನ

» ದಾವಣಗೆರೆ

ಸಮಾಜದಲ್ಲಿ ಹೆಣ್ಣು ಮತ್ತು ಗಂಡು ಎಂಬ ಲಿಂಗತಾರತಮ್ಯ ಸಲ್ಲದಾಗಿದ್ದು ಪ್ರಸವ ಪೂರ್ವ ಮತ್ತು ನಂತರದಲ್ಲಿ ಹೆಣ್ಣು ಭ್ರೂಣ ಹತ್ಯೆ ಕಾನೂನುಬಾಹಿರವಾಗಿದೆ. ಯಾವುದೇ ಕಾರಣಕ್ಕೂ ಇಂತಹ ಕೃತ್ಯಗಳು ನಡೆಯದಂತೆ ಎಚ್ಚರಿಕೆ ವಹಿಸಬೇಕೆಂದು ದಾವಣಗೆರೆ ಉಪವಿಭಾಗಾಧಿಕಾರಿ ಸಂತೋಷ್ ಪಾಟೀಲ್ ಸೂಚನೆ ನೀಡಿದರು.

ಅವರು ಬುಧವಾರ ಅವರ ಕಚೇರಿಯಲ್ಲಿ ನಡೆದ ಪಿ.ಸಿ ಮತ್ತು ಪಿಎನ್‌ಡಿಟಿ ಸಮನ್ವಯ ಸಮಿತಿ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಪ್ರಸವ ಪೂರ್ವದಲ್ಲಿ ಭ್ರೂಣಲಿಂಗಪತ್ತೆ ಮಾಡುವುದು ಕಾನೂನು ಬಾಹಿರವಾಗಿದೆ.

ಆದರೂ ಸಹ ಸ್ಕ್ಯಾನಿಂಗ್ ಕೇಂದ್ರಗಳಲ್ಲಿ ಲಿಂಗಪತ್ತೆಯಂತಹ ಕೃತ್ಯಗಳು ನಡೆಯುತ್ತಿರುವ ವರದಿಯನ್ನು ಗಮನಿಸಲಾಗಿದೆ. ಜಿಲ್ಲೆಯಲ್ಲಿ ಯಾವುದೇ ಸ್ಕ್ಯಾನಿಂಗ್ ಸೆಂಟರ್‌ಗಳಲ್ಲಿ ಲಿಂಗಪತ್ತೆ ಮಾಡಿ ಭ್ರೂಣಹತ್ಯೆಗೆ ಸಹಕಾರ ನೀಡುವಂತಹ ಕೆಲಸವನ್ನು ಯಾವುದೇ ವೈದ್ಯರು ಮಾಡಬಾರದು ಎಂದರು.



ಜಿಲ್ಲೆಯಲ್ಲಿನ ಎಲ್ಲಾ ಸ್ಕ್ಯಾನಿಂಗ್ ಕೇಂದ್ರಗಳು ಜಿಲ್ಲಾ ಮಟ್ಟದ ಸಲಹಾ ಸಮಿತಿಯಿಂದ ಅನುಮೋದನೆ ಪಡೆದುಕೊಂಡು ಪ್ರಾರಂಭಿಸಬೇಕು, ಆದರೆ ಕೆಲವು ಸೆಂಟರ್‌ಗಳಿಗೆ ಅನುಮೋದನೆ ನೀಡಿ ನಂತರ ಸಮಿತಿಯಿಂದ ಘಟನೋತ್ತರ ಅನುಮತಿ ಪಡೆಯುತ್ತಿದ್ದು ಮುಂದಿನ ದಿನಗಳಲ್ಲಿ ಇದಕ್ಕೆ ಅವಕಾಶ ನೀಡುವುದಿಲ್ಲ. ಸ್ಕ್ಯಾನಿಂಗ್ ಕೇಂದ್ರಗಳಲ್ಲಿ ಕಡ್ಡಾಯವಾಗಿ ರೇಡಿಯೋಲಾಜಿಸ್ಟ್ ವೈದ್ಯರು ಇರಲೇಬೇಕು ಮತ್ತು ಯಾವುದೇ ಕಾರಣಕ್ಕೂ ತಾಂತ್ರಿಕ ಸಹಾಯಕರು ಸ್ಕ್ಯಾನಿಂಗ್ ಮಾಡುವಂತಿಲ್ಲ, ಸ್ಕ್ಯಾನಿಂಗ್ ದರಗಳನ್ನು ಆಯಾ ಕೇಂದ್ರಗಳಲ್ಲಿ ಸಾರ್ವಜನಿಕರಿಗೆ ಕಾಣುವಂತೆ ಪ್ರದರ್ಶನ ಮಾಡಬೇಕೆಂದರು.

ಅನಿರೀಕ್ಷಿತ ಭೇಟಿ; ಮುಂದಿನ ದಿನಗಳಲ್ಲಿ ಸ್ಕ್ಯಾನಿಂಗ್ ಕೇಂದ್ರಗಳಿಗೆ ಅನಿರೀಕ್ಷಿತ ಭೇಟಿ ನೀಡಿ ಪರಿಶೀಲನೆ ನಡೆಸಲಾಗುತ್ತದೆ. ಒಂದು ವೇಳೆ ನಿಯಮಬಾಹಿರವಾಗಿ ಸ್ಕ್ಯಾನಿಂಗ್ ಮಾಡುತ್ತಿದ್ದಲ್ಲಿ, ಅಂತಹ ಕೇಂದ್ರಗಳ ಪರವಾನಗಿ ರದ್ದು ಮಾಡಲು ಕ್ರಮ ಕೈಗೊಳ್ಳಲಾಗುತ್ತದೆ ಎಂದರು.

ಲಿಂಗಾನುಪಾತದಲ್ಲಿ 2 ನೇ ಸ್ಥಾನ; ದಾವಣಗೆರೆ ಜಿಲ್ಲೆಯು ನವಜಾತ ಶಿಶುಗಳ ಜನನದ ಲಿಂಗಾನುಪಾತದಲ್ಲಿ ರಾಜ್ಯದಲ್ಲಿ 2 ನೇಸ್ಥಾನದಲ್ಲಿದೆ. 2024 ರ ಏಪ್ರಿಲ್ ನಿಂದ 2025 ರ ಮಾರ್ಚ್ ವರೆಗಿನ ಅಂಕಿಅಂಶಗಳನ್ವಯ 21938 ನವಜಾತ ಶಿಶುಗಳ ಜನನವಾಗಿದ್ದು ಇದರಲ್ಲಿ 10765 ಹೆಣ್ಣು ಮತ್ತು 11173 ಗಂಡು ಮಗುವಿನ ಜನನವಾಗಿದೆ. ಇದು ರಾಜ್ಯದಲ್ಲಿ 2 ನೇ ಸ್ಥಾನದಲ್ಲಿದ್ದು ಮೊದಲು ಉಡುಪಿ, ರಾಮನಗರ 3 ನೇಸ್ಥಾನ ಮತ್ತು ಶಿವಮೊಗ್ಗ 4 ರಲ್ಲಿದೆ.

ಜಿಲ್ಲೆಯಲ್ಲಿ ಸರ್ಕಾರಿ 7 ಮತ್ತು ಖಾಸಗಿ ಮತ್ತು ಇತರೆ ಸಂಸ್ಥೆಗಳಲ್ಲಿ 125 ಸೇರಿ ಒಟ್ಟು 132 ಸ್ಕ್ಯಾನಿಂಗ್ ಕೇಂದ್ರಗಳಿವೆ. ಇದರಲ್ಲಿ ಪ್ರಸ್ತುತ 113 ಕಾರ್ಯನಿರ್ವಹಿಸುತ್ತಿವೆ.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ; ಷಣ್ಮುಖಪ್ಪ, ಮಕ್ಕಳ ತಜ್ಞರು ಹಾಗೂ ಜಿಲ್ಲಾ ಸಲಹಾ ಸಮಿತಿ ಅಧ್ಯಕ್ಷರಾದ ಡಾ; ಎನ್. ಕೆ.ಕಾಳಪ್ಪನವರ್, ಜಿಲ್ಲಾ ಸಲಹಾ ಸಮಿತಿ ನೋಡಲ್ ಅಧಿಕಾರಿ ಡಾ; ರುದ್ರಸ್ವಾಮಿ ಎಂ.ಕೆ, ಹಿಮೋಪೋಲಿಯೋ ಸೊಸೈಟಿ ಡಾ; ಮೀರಾ ಹನಗವಾಡಿ, ಮಹಿಳಾ ಮತ್ತು ಮಕ್ಕಳ ಆಸ್ಪತ್ರೆ ಪ್ರಸೂತಿ ತಜ್ಞೆ ಡಾ; ಪ್ರವೀಣ ಎಸ್.ಎನ್, ಚಿಗಟೇರಿ ಆಸ್ಪತ್ರೆ ರೇಡಿಯೋಲಾಜಿಸ್ಟ್ ಡಾ; ಸುಮಿತ್ರ ಎಲ್ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### 15441.17 ಕೋಟಿ ರೂ. ಮೊತ್ತದ ಬಂಡವಾಳ ಹೂಡಿಕೆ ಯೋಜನೆಗಳಿಗೆ ಅನುಮೋದನೆ: ಸಿಎಂ



» **ಬೆಂಗಳೂರು**

ರಾಜ್ಯ ಉನ್ನತ ಮಟ್ಟದ ಒಪ್ಪಿಗೆ ನೀಡಿಕೆ ಸಮಿತಿಯ 65 ನೇ ಸಭೆಯ ಅಧ್ಯಕ್ಷತೆ ವಹಿಸಿದ್ದ ಮುಖ್ಯಮಂತ್ರಿಗಳು, ಒಟ್ಟು 15441.17 ಕೋಟಿ ರೂ. ಮೊತ್ತದ ಬಂಡವಾಳ ಹೂಡಿಕೆ ಯೋಜನೆಗಳಿಗೆ ಅನುಮೋದನೆ ನೀಡಿದ್ದು , ಸುಮಾರು 5277 ಜನರಿಗೆ ಉದ್ಯೋಗ ಲಭ್ಯವಾಗಲಿದೆ ಎಂದು ತಿಳಿಸಿದರು. ವಿಧಾನಸೌಧದ ಸಮಿತಿ ಕೊಠಡಿಯಲ್ಲಿ ನಡೆದ ಇಂದಿನ ಸಭೆಯಲ್ಲಿ ನಾಲ್ಕು ಹೊಸ/ ವಿಸ್ತರಣಾ ಬಂಡವಾಳ ಹೂಡಿಕೆ ಪ್ರಸ್ತಾವನೆಗಳು ಹಾಗೂ ಎರಡು ಹೆಚ್ಚುವರಿ ಬಂಡವಾಳ ಹೂಡಿಕೆ ಪ್ರಸ್ತಾವನೆಗಳು ಸೇರಿದಂತೆ ಅನುಷ್ಠಾನದ ವಿವಿಧ ಹಂತದಲ್ಲಿರುವ ಒಟ್ಟು 10 ತಿದ್ದುಪಡಿ ಯೋಜನಾ ಪ್ರಸ್ತಾವನೆಗಳಿಗೆ ಅನುಮೋದನೆ ನೀಡಲಾಗಿದೆ ಎಂದು ತಿಳಿಸಿದರು. ಮೆ.ಶ್ರೀ ಸಿಮೆಂಟ್ ಲಿಮಿಟೆಡ್ ಸಂಸ್ಥೆಯ 2406 ಕೋಟಿ ರೂ.ಗಳ ಹೊಸ ಬಂಡವಾಳ ಹೂಡಿಕೆಯ ಯೋಜನೆಯಿಂದ 300 ಉದ್ಯೋಗ , ಮೆ. ದಾಲ್ಮಿಯಾ(ಭಾರತ್) ಲಿ. ಸಂಸ್ಥೆ ಯ 3000 ಕೋಟಿ ರೂ. ಹೂಡಿಕೆಯಿಂದ 570 ಉದ್ಯೋಗ ಹಾಗೂ ಮೆ. ದಾಲ್ಮಿಯಾ(ಭಾರತ್) ಲಿ. ಸಂಸ್ಥೆ ಯ 3020 ಕೋಟಿ ರೂ. ಹೂಡಿಕೆಯಿಂದ 570 ಉದ್ಯೋಗ ಸೃಷ್ಟಿ, ಮೆ. ಎಂವೀ ಎನರ್ಜಿ ಪ್ರೈ.ಲಿ ಸಂಸ್ಥೆ ಯ 5495 ಕೋಟಿ ರೂ. ಹೂಡಿಕೆಯಿಂದ 2508 ಉದ್ಯೋಗ ಸೃಷ್ಟಿಯಾಗಲಿದೆ. ನೂತನ ಹೂಡಿಕೆ ಪ್ರಸ್ತಾವನೆಗಳಿಂದ ಒಟ್ಟು 13921 ಕೋಟಿ. ರೂ. ಹೂಡಿಕೆಯಾಗಲಿದ್ದು, 3948 ಉದ್ಯೋಗ ಸೃಷ್ಟಿಯಾಗಲಿದೆ ಎಂದು ತಿಳಿಸಿದರು. ಸಭೆಯಲ್ಲಿ ಸಚಿವರಾದಎಂಬಿಪಾಟೀಲ್,ಚೆಲುವರಾಯಸ್ವಾಮಿ ಪ್ರಿಯಾಂಕ ಖರ್ಗೆ, ಸರ್ಕಾರದ ಮುಖ್ಯ ಕಾರ್ಯದರ್ಶಿಗಳಾದ ಡಾ ಶಾಲಿನಿ ರಜನೀಶ್, ಅಪರ ಮುಖ್ಯ ಕಾರ್ಯದರ್ಶಿಗಳಾದ ಎಲ್ ಕೆ ಅತೀಕ್, ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ವಿವಿಧ ಇಲಾಖೆಗಳ ಉನ್ನತ ಅಧಿಕಾರಿಗಳು ಹಾಜರಿದ್ದರು.

### ಬೆಂಗಳೂರಿನ ಎ.ಕೆ. ಕಾಲೋನಿಯಲ್ಲಿ ಎಚ್. ಆಂಜನೇಯ ಪಾದಯಾತ್ರೆ



» **ಬೆಂಗಳೂರು**

ಪರಿಶಿಷ್ಟ ಜಾತಿ ಒಳ ಮೀಸಲಾತಿ ಜಾರಿಗಾಗಿ ಕೈಗೊಂಡಿರುವ ಜಾತಿಗಣತಿ ಸಮೀಕ್ಷೆ ಕಾರ್ಯ ಬೆಂಗಳೂರು ನಗರದಲ್ಲಿ ಮಂದಗತಿಯಲ್ಲಿ ಸಾಗುತ್ತಿದ್ದು, ಆದ್ದರಿಂದ ಅವಧಿ ವಿಸ್ತರಣೆ ಜೊತೆಗೆ ಗಣತಿದಾರರಿಗೆ ಸೂಕ್ತ ಮಾರ್ಗದರ್ಶನದೊಂದಿಗೆ ಸರ್ವೇ ಕಾರ್ಯ ಚುರುಕುಗೊಳಿಸುವಂತೆ ಕೋರಿ ನ್ಯಾಯಮೂರ್ತಿ ಹೆಚ್.ಎನ್.ನಾಗಮೋಹನ್ ದಾಸ್ ಏಕಸದಸ್ಯ ವಿಚಾರಣಾ ಆಯೋಗಕ್ಕೆ ಪತ್ರ ಬರೆದಿದ್ದೇನೆ ಎಂದು ಮಾಜಿ ಸಚಿವ ಹೆಚ್.ಆಂಜನೇಯ ತಿಳಿಸಿದ್ದಾರೆ.ಬೆಂಗಳೂರಿನ ಸಿ.ವಿ.ರಾಮನ್ ನಗರ ವ್ಯಾಪ್ತಿಯ ಎಂ.ಸಿ.ಕಾಲೋನಿಯ ದೊಡ್ಡಗುಂಟ ಬಡಾವಣೆಯಲ್ಲಿ ಬುಧವಾರ ಜಾತಿಗಣತಿ ಜಾಗೃತಿ ಪಾದಯಾತ್ರೆ ವೇಳೆ, ಮಾದಿಗರು ಹಾಗೂ ಪೌರಕಾರ್ಮಿಕರ ಮನೆಗಳಿಗೆ ಭೇಟಿ ನೀಡಿ ಕಡ್ಡಾಯವಾಗಿ ಜಾತಿಗಣತಿ ಕಾರ್ಯದಲ್ಲಿ 061–ಮಾದಿಗ ಎಂದು ಬರೆಯಿಸುವಂತೆ ತಿಳಿಸಿದರು.ಈ ವೇಳೆ ಸಮೀಕ್ಷೆದಾರರ ಜೊತೆ ಹೆಜ್ಜೆ ಹಾಕಿದ ಆಂಜನೇಯ, ನೋಂದಣಿ ಕಾರ್ಯ ವೀಕ್ಷಿಸಿದರು. ಈ ವೇಳೆ ಚಿಕ್ಕ ಮಕ್ಕಳು ಹಾಗೂ ಆಧಾರ್ ಕಾರ್ಡ್ ಇಲ್ಲದ 18 ವರ್ಷದೊಳಗಿನವರ ನೋಂದಣಿಗೆ ನಿರಾಕರಿಸುತ್ತಿದ್ದವರೊಂದಿಗೆ ಚರ್ಚೆ ನಡೆಸಿದರು.

ಆಯೋಗ ಈಗಾಗಲೇ ಆಗ ತಾನೇ ಹುಟ್ಟಿದ ಮತ್ತು 18 ವರ್ಷದೊಳಗಿನವರ ನೋಂದಣಿಗೆ ಆಧಾರ್ ಕಾರ್ಡ್ ಬೇಕಿಲ್ಲ ಎಂದು ಸೂಚಿಸಿದೆ. ಮನೆಯ ಹಿರಿಯರೊಬ್ಬರ ಆಧಾರ್ ಕಾರ್ಡ್ ಲಿಂಕ್ ಮಾಡಿ, ಮಕ್ಕಳ ಹೆಸರನ್ನು ನೋಂದಾಯಿಸಬಹುದು ಎಂದು ತಿಳಿಸಿದರು.ಈ ವೇಳೆ ನೋಂದಾಣಿ ಮಾಡಿಕೊಳ್ಳಲು ನಿರಾಕರಿಸುತ್ತಿದ್ದಂತೆ ಸಮಾಜ ಕಲ್ಯಾಣ ಇಲಾಖೆ ಆಯುಕ್ತರಿಗೆ ಫೋನ್ ಕರೆ ಮಾಡಿ ಅವರೊಂದಿಗೆ ಗಣತಿದಾರರಿಗೆ ಆಯೋಗದ ಸೂಚನೆ ತಿಳಿಸಿ ಸಮಸ್ಯೆ ಪರಿಹರಿಸಿದರು.ಈ ವೇಳೆ ಮಾತನಾಡಿದ ಆಂಜನೇಯ, ಈಗಾಗಲೇ ರಾಜ್ಯಾದ್ಯಂತ ಸುತ್ತುವರಿದಿದ್ದೇನೆ. ಗ್ರಾಮೀಣ ಪ್ರದೇಶದಲ್ಲಿ ಸರ್ವೇ ಕಾರ್ಯ ಚೆನ್ನಾಗಿ ಆಗುತ್ತಿದೆ. ಆದರೆ, ಬೆಂಗಳೂರು ನಗರ ಪ್ರದೇಶದಲ್ಲಿ ಮಂದಗತಿಯಲ್ಲಿ ಸಾಗುತ್ತಿದೆ.




ಈ ವರ್ಷದ ಬೇಸಿಗೆಯ ತಾಪಮಾನ ಬಹುತೇಕ ಇಡೀ ಕರ್ನಾಟಕದ ಜನರನ್ನು ಅಲುಗಾಡಿಸಿ ಬಿಟ್ಟಿತು. ಅದರಲ್ಲೂ ಮಧ್ಯಮ,ಕೆಳಮಧ್ಯಮ ಮತ್ತು ಬಡವರ್ಗದ ಜನರು ತಾಪಮಾನದ ಏರಿಕೆಯಿಂದ ತತ್ತರಿಸಿ ಹೋದರು. ಕೆಲವು ಜೀವಗಳು ಹೊರಟೇ ಹೋದವು. ಇನ್ನೊಂದಷ್ಟು ಜನ ಅನಾರೋಗ್ಯಗಳಿಗೆ ತುತ್ತಾದರು. ಪ್ರಾಣಿಪಕ್ಷಿಗಳು ಕಣ್ಣ ಮುಂದೆಯೇ ತುಂಬಾ ಒದ್ದಾಡಿದವು......

ಈಗ ಎರಡು ಮೂರು ದಿನದಿಂದ ಸ್ವಲ್ಪಮಟ್ಟಿಗೆ ಉಷ್ಣಾಂಶ ಕಡಿಮೆಯಾಗಿದೆ. ಆದರೆ ಆ ತಾಪಮಾನದ ಹೊಡೆತ ನಮಗೆ ಒಂದು ಬಹುದೊಡ್ಡ ಪಾಠವಾಗಬೇಕು ಇತ್ತೀಚೆಗೆ ಸಾಮಾಜಿಕ ಜಾಲತಾಣಗಳಲ್ಲಿ ಪ್ರತಿ ವರ್ಷ ಹೀಗೆ ಒಂದೊಂದು ಡಿಗ್ರಿ ಸೆಲ್ಸಿಯಸ್ ಉಷ್ಣಾಂಶ ಜಾಸ್ತಿಯಾಗುತ್ತಾ ಹೋಗುತ್ತದೆ ಎಂದು ಯಾರೋ ಬರೆದ ಒಂದು ಲೇಖನ ಪ್ರಸಾರವಾಗುತ್ತಿದೆ. ಅದು ಎಷ್ಟರಮಟ್ಟಿಗೆ ನಿಜವೋ ಗೊತ್ತಿಲ್ಲ. ಆದರೆ ಮುಂದೆಯೂ ಪರಿಸರವನ್ನು ಹೀಗೇ ನಿರ್ಲಕ್ಷಿಸಿದರೆ ಖಂಡಿತವಾಗಿಯೂ ತಾಪಮಾನದ ಹೊಡೆತಕ್ಕೆ ನಾವೆಲ್ಲರೂ ನಾಶವಾಗುವುದು ನಿಶ್ಚಿತ. ಅದಕ್ಕಾಗಿ ಆ ಹಂತ ತಲುಪುವ ಮುನ್ನವೇ ನಾವೆಲ್ಲ ಎಚ್ಚೆತ್ತುಕೊಳ್ಳಬೇಕಾಗಿದೆ ಮತ್ತು ಆ ನಿಟ್ಟಿನಲ್ಲಿ ಒಂದಷ್ಟು ಕೆಲಸ ಮಾಡಬೇಕಾಗಿದೆ........

ಮುಖ್ಯವಾಗಿ ಪ್ರತಿ ಗ್ರಾಮ ಪಂಚಾಯಿತಿ ಮಟ್ಟದಲ್ಲಿ, ಈ ವರ್ಷದ ಈಗ ಪ್ರಾರಂಭವಾಗಿರುವ ಮಳೆಗಾಲದಲ್ಲಿ ಕನಿಷ್ಠ ಒಂದು ಲಕ್ಷ ಗಿಡಗಳನ್ನು ಬೆಳೆಸುವ ಪ್ರತಿಜ್ಞೆ ಮಾಡಬೇಕು. ಹಾಗೆಯೇ ಹೋಬಳಿ ಮಟ್ಟದಲ್ಲಿ 10 ಲಕ್ಷ ಗಿಡಗಳು, ತಾಲೂಕು ಮಟ್ಟದಲ್ಲಿ 50 ಲಕ್ಷದಷ್ಟು ಗಿಡಗಳು ಮತ್ತು ಗ್ರೇಡ್–ಒನ್ ನಗರಗಳಲ್ಲಿ ಅಂದರೆ ಜಿಲ್ಲಾಮಟ್ಟದಲ್ಲಿ ಒಂದು ಕೋಟಿ ಗಿಡಮರಗಳನ್ನು ನೆಡುವ ಕಾರ್ಯಕ್ರಮವನ್ನು ತತ್ಕ್ಷಣದಿಂದಲೇ ಹಮ್ಮಿಕೊಳ್ಳಬೇಕು. ಸರ್ಕಾರ ಮತ್ತು ಸ್ವಯಂಸೇವಾ ಸಂಸ್ಥೆಗಳ ಜಂಟಿ ನೇತೃತ್ವದಲ್ಲಿ



ಇದನ್ನು ಆರಂಭಿಸಬೇಕು. ಅಂದರೆ ಇಡೀ ರಾಜ್ಯದಲ್ಲಿ ನೂರಾರು ಕೋಟಿ ಗಿಡಗಳನ್ನು ಈ ಮಳೆಗಾಲದ ಸಮಯದಲ್ಲಿ ನೆಟ್ಟರೆ ಕನಿಷ್ಠ ಅದರಲ್ಲಿ ತೀರಾ ಕಡಿಮೆ ಎಂದರೂ 30 ರಿಂದ 40 ಶೇಕಡಾ ಗಿಡಗಳು ಉಳಿಸಿ ಬೆಳೆಸುವಲ್ಲಿ ಯಶಸ್ವಿಯಾದರೆ ಎಷ್ಟೋ ಕೋಟಿ ಮರಗಳು ಬೆಳೆಯುತ್ತವೆ. ಇಡೀ ರಾಜ್ಯದಲ್ಲಿ ಅರಣ್ಯ ಪ್ರದೇಶ ತುಂಬಾ ಹೆಚ್ಚಾಗುತ್ತದೆ.....

ಆಗ ಆಮ್ಲಜನಕ ಹೆಚ್ಚಾಗುತ್ತದೆ. ಮಳೆಯ ಕೊರತೆ ಕಡಿಮೆಯಾಗುತ್ತದೆ. ತಾಪಮಾನದ ಕುಸಿತ, ಮನಸ್ಸಿನ ಆಹ್ಲಾದ, ಆರೋಗ್ಯ ಎಲ್ಲವುಗಳಲ್ಲಿ ಕೆಲವೇ ವರ್ಷದಲ್ಲಿ ಕ್ರಾಂತಿಕಾರಕ ಬದಲಾವಣೆ ಉಂಟು ಮಾಡುತ್ತದೆ.....

ಇಷ್ಟನ್ನು ಸಹ ನಮ್ಮಿಂದ ಮಾಡಲು ಸಾಧ್ಯವಿಲ್ಲವೇ ! ಪ್ರಕೃತಿ ತನ್ನ ಕಷ್ಟ ಸಹಿಸಿ ನಮಗೆ ಸಹಾಯ ಮಾಡುತ್ತದೆ. ನಾವು ಆ ಪರಿಸರವನ್ನು ಉಳಿಸಲು ಇಷ್ಟೂ ಪ್ರಯತ್ನ ಪಡದಿದ್ದರೆ ನಮಗೆ ಕ್ಷಮೆಯೇ ಇಲ್ಲ.....

ಯಾರು ಏನು ಮಾಡುತ್ತಿರೋ ಗೊತ್ತಿಲ್ಲ. ಅವರವರ ಸಾಮರ್ಥ್ಯಕ್ಕೆ ತಕ್ಕಂತೆ ಸರ್ಕಾರ ಮತ್ತು ಸ್ವಯಂಸೇವಾ ಸಂಸ್ಥೆಗಳು ಹಾಗೂ ಸಾಮಾನ್ಯ ಜನರು ದಯವಿಟ್ಟು ಇದನ್ನು ಒಂದು ದೊಡ್ಡ ಅಭಿಯಾನವಾಗಿ ಪ್ರಾರಂಭಿಸಿ, ಮಳೆಗಾಲದಲ್ಲಿ ಗಿಡ ನೆಟ್ಟರೆ, ನೀರು ಉಣಿಸುವ ತೊಂದರೆಯೂ ಇರುವುದಿಲ್ಲ. ಸಹಜವಾಗಿಯೇ ಮಳೆ ನೀರಿನಲ್ಲಿ ಅವು ಬೆಳೆಯುತ್ತವೆ. ಸ್ವಲ್ಪ ಸಸಿ ದೊಡ್ಡದಾಗುವವರೆಗೂ ಒಂದಷ್ಟು ಜಾಗೃತಿ ವಹಿಸಿದರೆ ಸಾಕು....

ಯೋಚಿಸಿ, ಏನನ್ನಾದರೂ ಮಾಡಿ. ಮುಂದಿನ ವರ್ಷಕ್ಕೆ ಇಷ್ಟೊಂದು ತಾಪಮಾನ ಹೆಚ್ಚಾಗದೆ ನಿಯಂತ್ರಿಸಲು ನಮ್ಮ ನಮ್ಮ ಕರ್ತವ್ಯ ನಿರ್ವಹಿಸೋಣ. ಈ ವರ್ಷದ ಭೀಕರ ಬಿಸಿಲನ್ನು ಮರೆಯುವುದು ಬೇಡ. ಅದು ಸದಾ ನೆನಪಾಗಿ ಗಿಡ ಬೆಳೆಸುವ ಕೆಲಸ ವೇಗ ಪಡೆಯಲಿ......

ಹಾಗೆಯೇ, ಫ್ಲೈ ಓವರ್ ಗಳು,

ಅನಾವಶ್ಯಕವಾದ ಉದ್ದುದ್ದ, ಹೆಚ್ಚು ಅಗಲದ ರಸ್ತೆಗಳು ಮುಂತಾದವುಗಳನ್ನು ಕಡಿಮೆ ಮಾಡಿ, ಆ ಜಾಗದಲ್ಲಿ ಕೆರೆಕಟ್ಟೆಗಳು, ಇಂಗು ಗುಂಡಿಗಳು ಮುಂತಾದ ನೀರಾವರಿ ಯೋಜನೆಗಳು, ನೀರಿನ ಸಂಗ್ರಹ ಕಾಲುವೆಗಳ ಬಗ್ಗೆ ಹೆಚ್ಚು ಗಮನಹರಿಸುವಂತೆ ಸ್ಥಳೀಯ ಜನರು ಅಲ್ಲಿನ ಆಡಳಿತ ಮತ್ತು ರಾಜಕೀಯ ವ್ಯವಸ್ಥೆಯನ್ನು ಒತ್ತಾಯಿಸಬೇಕಾಗುತ್ತದೆ. ಅಭಿವೃದ್ಧಿಯ ಪರಿಕಲ್ಪನೆಯನ್ನು ನಾವು ಬದಲಾಯಿಸಿಕೊಳ್ಳದಿದ್ದರೆ ಇಡೀ ದೇಶ ಸಿಮೆಂಟ್ ಕಾಡಾಗಿ ತಾಪಮಾನ, ಬರಗಾಲ ನಮ್ಮನ್ನು ನಿರಂತರವಾಗಿ ಕಾಡುತ್ತದೆ. ನಮ್ಮ ಮುಂದಿನ ಪೀಳಿಗೆಗೆ ನಾವು ಅತ್ಯಂತ ಅಪಾಯಕಾರಿ ವಾತಾವರಣವನ್ನು ಕೊಡುಗೆಯಾಗಿ ನೀಡಿದಂತಾಗುತ್ತದೆ.ಅವರು ನಮ್ಮನ್ನು ಕ್ಷಮಿಸುವುದಿಲ್ಲ......

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ, ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ, ಮನಗಳಲ್ಲಿ,ಮನೆಗಳಲ್ಲಿ,ಮತಗಳಲ್ಲಿ,ಪರಿವರ್ತನೆಗಾಗಿ, ಮನಸ್ಸುಗಳ ಅಂತರಂಗದ ಚಳವಳಿ,



» **ಲೇಖನ**
**ವಿವೇಕಾನಂದ. ಹೆಚ್.ಕೆ.**
**9844013068**

# ಮೇ 30, 31 ರಂದು DC, CEO ಮತ್ತು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳ ಸಭೆ ಕರೆದ ಸಿಎಂ

» **ಬೆಂಗಳೂರು**

ರಾಜ್ಯಾದ್ಯಂತ ಭಾರಿ ಮಳೆ ಆಗುತ್ತಿರುವ ಹಿನ್ನೆಲೆಯಲ್ಲಿ ತಕ್ಷಣ ಪ್ರವಾಹ ಪೀಡಿತ ಪ್ರದೇಶಗಳಿಗೆ ತೆರಳಿ ಪರಿಹಾರ ಕಾರ್ಯದ ಉಸ್ತುವಾರಿ ನೋಡಿಕೊಳ್ಳುವಂತೆ ಜಿಲ್ಲಾ ಮಂತ್ರಿಗಳು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೂಚನೆ ನೀಡಿದ್ದಾರೆ.

ಮಳೆಯಿಂದ ಆಗಿರುವ ಅನಾಹುತದ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡ ಮುಖ್ಯಮಂತ್ರಿಗಳು ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವಂತೆ ಆದೇಶಿಸಿದರು.

ಜೋರು ಮಳೆಯಿಂದ ಹಾನಿಗೆ ಒಳಗಾಗಿರುವ ಮತ್ತು ಪ್ರವಾಹ ಪೀಡಿತ ಪ್ರದೇಶಗಳಿಗೆ ತಕ್ಷಣ ಭೇಟಿ ನೀಡಿ ಪರಿಸ್ಥಿತಿಯನ್ನು ಸಮಗ್ರವಾಗಿ ಅವಲೋಕಿಸುವಂತೆ ಜಿಲ್ಲಾ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಿಗೆ ಸೂಚನೆ ನೀಡಿದ್ದಾರೆ.

ಹಾಗೂ ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಈ ಬಗ್ಗೆ ಕಟ್ಟೆಚ್ಚರ ಮತ್ತು ತೀವ್ರ ನಿಗಾ ವಹಿಸಿ ತಕ್ಷಣ ತಕ್ಷಣ ಪರಿಹಾರ ಕಾರ್ಯಗಳನ್ನು ಸಮರೋಪಾದಿಯಲ್ಲಿ ನಿರ್ವಹಿಸಲು ಸೂಚನೆ ನೀಡಿದ್ದಾರೆ. ಈ ಬಗ್ಗೆ ಸಮಗ್ರ ಅವಲೋಕನ ನಡೆಸಲು , ಮೇ 30, 31 ರಂದು ಆಅ , ಅಇಔ ಮತ್ತು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳ ಸಭೆಯನ್ನು ಕರೆಯುವಂತೆ ಮುಖ್ಯಮಂತ್ರಿಗಳು ಸರ್ಕಾರದ ಮುಖ್ಯ ಕಾರ್ಯದರ್ಶಿ ಅವರಿಗೆ ಸೂಚನೆ ನೀಡಿದ್ದಾರೆ.

**ಸದ್ಯ ತೆಗೆದುಕೊಂಡಿರುವ ಕ್ರಮಗಳು...**

- **ರಾಜ್ಯದಲ್ಲಿ 170 ತಾಲ್ಲೂಕುಗಳನ್ನು ಪ್ರವಾಹ/ಭೂಕುಸಿತಕ್ಕೆ ಗುರಿಯಾಗುವ ತಾಲ್ಲೂಕುಗಳೆಂದು ಗುರುತಿಸಲಾಗಿದ್ದು, ಮುಂಜಾಗ್ರತೆಯಾಗಿ 2,296 ಕಾಳಜಿ/ ಆಶ್ರಯ ತಾಣಗಳನ್ನು ಗುರುತಿಸಲಾಗಿದೆ.**
- **ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿ 201 ಸ್ಥಳಗಳನ್ನು ಪ್ರವಾಹ ಪೀಡಿತ ಸ್ಥಳಗನ್ನು ಗುರುತಿಸಲಾಗಿದೆ.**
- **ಮೇ-26, 2025 ರವರೆಗೆ ರಾಜ್ಯದಲ್ಲಿ 45 ಮನೆಗಳು ಸಂಪೂರ್ಣವಾಗಿ ಹಾನಿಗೊಂಡಿದ್ದು, 1,385 ಮನೆಗಳು ಭಾಗಶಃ ಹಾನಿಯಾಗಿದ್ದು, ಅದರಲ್ಲಿ ಶೇ.99% ರಷ್ಟು ಆರ್ಥಿಕ ಸಹಾಯ ಧನವನ್ನು ಪಾವತಿ ಮಾಡಲಾಗಿದೆ.**
- **ಮೇ-26, 2025 ರಂತೆ ವಿಪತ್ತು ನಿರ್ವಹಣೆಗಾಗಿ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಪಿ.ಡಿ ಖಾತೆಯಲ್ಲಿ ರೂ.97,351.95 ಲಕ್ಷಗಳು ಅನುದಾನವಿರುತ್ತದೆ.**

## ಸೈನಿಕರು, ರೈತರು, ವೈದ್ಯರು, ಶಿಕ್ಷಕರು ನಮ್ಮ ತಂದೆ ತಾಯಿಯಷ್ಟೇ ಸ್ಮರಣೀಯರು: ಸಿ.ಎಂ

**ಬೆಂಗಳೂರು:** ಸೈನಿಕರು, ರೈತರು, ವೈದ್ಯರು, ಶಿಕ್ಷಕರು ನಮ್ಮ ತಂದೆ ತಾಯಿಯಷ್ಟೇ ಸ್ಮರಣೀಯರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನುಡಿದರು. ಟೌನ್ ಹಾಲ್ ನಲ್ಲಿ ಆಯೋಜಿಸಿದ್ದ ಬೃಹತ್ "ಜೈ ಹಿಂದ್ ಸಭಾ" ಕಾರ್ಯಕ್ರಮದಲ್ಲಿ ಭಾರತೀಯ ಯೋಧರ ಪರಂಪರೆಯನ್ನು ಶ್ಲಾಘಿಸಿ, ನಿವೃತ್ತ ಯೋದ ಸಮೂಹವನ್ನು ಸನ್ಮಾನಿಸಿ, ಹುತಾತ್ಮ ಯೋಧರ ಕುಟುಂಬದ ಸದಸ್ಯರನ್ನು ಸನ್ಮಾನಿಸಿ ಪುರಸ್ಕರಿಸಿ ಮಾತನಾಡಿದರು.

ತ್ಯಾಗ ಮನೋಭಾವದಿಂದ ಯೋಧರು ದೇಶ ರಕ್ಷಣೆಯಲ್ಲಿ ತೊಡಗಿದ್ದಾರೆ. ದೇಶದ ರಕ್ಷಣೆ ಕೇವಲ ಯೋಧರ ಜವಾಬ್ದಾರಿಯಲ್ಲ. 140 ಕೋಟಿ ಭಾರತೀಯರ ಜವಾಬ್ದಾರಿ ಎಂದರು. ಶಿಷ್ಟ ರಕ್ಷಣೆ–ದುಷ್ಟರ ಸಂಹಾರದ ವಿಚಾರದಲ್ಲಿ ಭಾರತ ತನ್ನ ಇತಿಹಾಸದಲ್ಲೇ ಯಾವತ್ತೂ ರಾಜಿ ಆಗಿಲ್ಲ. ಮುಂದೆಯೂ ಆಗುವುದಿಲ್ಲ. ಇದು ಪ್ರತಿಯೊಬ್ಬ ಭಾರತೀಯರ ಬದ್ಧತೆ ಎಂದು ಶ್ಲಾಘಿಸಿದರು.

**ಸಿಎಂ ಮಹತ್ವದ ಘೋಷಣೆ:** ಯೋಧರ ಕ್ಯಾಂಟೀನ್ ಗೆ ಅಬಕಾರಿ ಸುಂಕ ಹಾಕುವುದಿಲ್ಲ ಎಂದು ಇದೇ ಸಂದರ್ಭದಲ್ಲಿ ಸಿಎಂ ಘೋಷಣೆ ಮಾಡಿದರು.



Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T